# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 126
Volume - 02 Issue - 126

ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462
RNI No: KARKAN/2023/88462

ಚಿತ್ರದುರ್ಗ
Chitradurga

ದಿನಾಂಕ: 04–12–2024 ಬುಧವಾರ
Date: 04-12-2024 Wednesday

ಪುಟ: 4
Page: 4

ಬೆಲೆ : ರೂ.2–00
Price: Rs. 2-00



ಒಳಪುಟದ ಸುದ್ದಿಗಳು

40 ಕೇಂದ್ರಗಳಲ್ಲಿ 7, 8ರಂದು ಪಿಡಿಓ ನೇಮಕಾತಿ ಪರೀಕ್ಷೆ: ಡಿಸಿ 2

ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಪೂರಕ ಅಂದಾಜಿನಲ್ಲಿ 44 ಕೋಟಿಮಂಜೂರು: ಸಿಎಂ 3

ದಿವ್ಯಾಂಗರ ಸರ್ವತೋಮುಖ ಏಳಿಗೆಗೆ ಯೋಜನೆ ರೂಪಿಸುವ ಅವಶ್ಯಕತೆ ಇದೆ 4



ಸುದ್ದಿ, ಜಾಹಿರಾತಿಗೆ
9686622252


## ಫಾಸ್ಟ್ ನ್ಯೂಸ್

### ಕುಸಿದು ಬಿದ್ದು ಪ್ರೌಢಶಾಲಾ ವಿದ್ಯಾರ್ಥಿ ಸೃಜನ್ ಸಾವು

» ಚಳ್ಳಕೆರೆ



ನಗರದ ಹಳೇಟೌನ್‌ನ ಪಾದಗಟ್ಟೆ ನಿವಾಸಿ ಶ್ರೀನಿವಾಸ್ ಎಂಬುವವರ ಪುತ್ರ ಸೃಜನ್(15) ಮನೆಯ ಮುಂದೆ ಆಟವಾಡುವ ಸಂದರ್ಭದಲ್ಲಿ ಕುಸಿದು ಬಿದ್ದು ಮೃತಪಟ್ಟಿರುತ್ತಾನೆ. ಇಲ್ಲಿನ ವಾರಿಯರ್ಸ್ ಪ್ರೌಢಶಾಲೆಯಲ್ಲಿ 9ನೇ ತರಗತಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿ ರಜೆ ಹಿನ್ನೆಲೆಯಲ್ಲಿ ಮನೆಗೆ ವಾಪಾಸ್ ಬಂದು ಮಧ್ಯಾಹ್ನ 12ರ ಸಮಯದಲ್ಲಿ ಮನೆ ಮುಂದೆ ಆಟವಾಡುವ ಸಂದರ್ಭದಲ್ಲಿ ಕುಸಿದು ಬಿದ್ದಿದ್ದಾನೆ. ಕೂಡಲೇ ಆಸ್ಪತ್ರೆ ದಾಖಲಿಸಿದ್ದು, ಪರೀಕ್ಷಿಸಿದ ವೈದ್ಯರು ಮೃತಪಟ್ಟಿರುವುದಾಗಿ ತಿಳಿಸಿದ್ದಾರ

### ಡಿ.6ರಂದು ಡಾ.ಬಿ.ಆರ್. ಅಂಬೇಡ್ಕರ್ ಪುಣ್ಯ ಸ್ಮರಣೆ

» ಚಿತ್ರದುರ್ಗ

ಡಿ.6ರಂದು ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 68ನೇ ಪುಣ್ಯ ಸ್ಮರಣೆ (ಮಹಾಪರಿನಿರ್ವಾಣ) ದಿನಾಚರಣೆ ಆಚರಿಸಲಾಗುವುದು. ಅಂದು ಬೆಳಿಗ್ಗೆ 9.30ಕ್ಕೆ ನಗರದಲ್ಲಿನ ಅಂಬೇಡ್ಕರ್ ಪ್ರತಿಮೆಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಲಾರ್ಪಣೆ ಮಾಡುವರು. ಕಾರ್ಯಕ್ರಮಕ್ಕೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಸಮುದಾಯದ ಮುಖಂಡರು ಅಥವಾ ಸಂಘಟನೆಗಳ ಪದಾಧಿಕಾರಿಗಳು, ಸಾರ್ವಜನಿಕರು ಹಾಜರಾಗಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ತಿಳಿಸಿದ್ದಾರೆ.

### ಕಳಪೆ ತಿಂಡಿ, ಊಟ ನೀಡಿದರೆ ಸಹಿಸುವುದಿಲ್ಲ; ನಗರಸಭೆ ಅಧ್ಯಕ್ಷೆ



» ಚಿತ್ರದುರ್ಗ

ಇಡ್ಲಿ ಸೀದಿದೆ, ಚಟ್ನಿ ನೀರಾಗಿದೆ, ಉಪ್ಪಿಟ್ಟಿಗೆ ಉಪ್ಪು ಜಾಸ್ತಿಯಿದೆ ಎಂದು ನಗರಸಭೆ ಅಧ್ಯಕ್ಷೆ ಸುಮಿತ ಇಂದಿರಾ ಕ್ಯಾಂಟಿನಲ್ಲಿನ ಉಪಹಾರ ಸೇವಿಸಿ ಉವಾಚಿಸಿದ ಪರಿಯಿದು.ಪ್ರವಾಸಿ ಮಂದಿರದ ಆವರಣದಲ್ಲಿರುವ ಇಂದಿರಾ ಕ್ಯಾಂಟಿನ್‌ಗೆ ಮಂಗಳವಾರ ಬೆಳಿಗ್ಗೆ ಸುರಿಯುತ್ತಿದ್ದ ಮಳೆಯ ನಡುವೆಯೇ ದಿಢೀರ್ ಭೇಟಿ ನೀಡಿ ಅಲ್ಲಿನ ಉಪಹಾರ ಸೇವಿಸಿ ಶುಚಿ–ರುಚಿ ಗುಣಮಟ್ಟ ಪರಿಶೀಲಿಸಿದ ಅಧ್ಯಕ್ಷೆ ಸುಮಿತ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹಾಗೂ ಬಡವರೆ ಹೆಚ್ಚಿನ ಸಂಖ್ಯೆಯಲ್ಲಿ ಇಂದಿರಾ ಕ್ಯಾಂಟೀನ್‌ಗೆ ಬರುವುದರಿಂದ ಕಳಪೆ ತಿಂಡಿ, ಊಟ ನೀಡಿದರೆ ಸಹಿಸುವುದಿಲ್ಲ ಎಂದು ಎಚ್ಚರಿಸಿದರು.ಉಪ್ಪಿಟ್ಟಿಗೆ ಈರುಳ್ಳಿ, ಟಮೋಟೋ, ಹಸಿಮೆಣಸಿನಕಾಯಿ, ಕೊತ್ತಂಬರಿ ಹಾಕಿ ನೀಟಾಗಿ ಮಾಡಿದರೆ ರುಚಿಯಿರುತ್ತದೆ. ಗಂಜಿಯಂತೆ ಮಾಡಿದರೆ ಯಾರು ಇಷ್ಟಪಡುವುದಿಲ್ಲ. ಇಡ್ಲಿ ಚೆನ್ನಾಗಿ ಬೇಯಿಸಿ. ಚಟ್ನಿ ಸ್ವಲ್ಪ ಗಟ್ಟಿಯಿರಲಿ. ಕುಡಿಯುವ ನೀರಿಗೆ ಪ್ಲಾಸ್ಟಿಕ್ ಲೋಟ ಬೇಡ. ಸ್ಟೀಲ್ ಕಪ್ ಇಡಿ. ಸಾಂಬಾರಿಗೆ ಬೇಳೆ ಕಡಿಮೆಯಾದರೂ ಪರವಾಗಿಲ್ಲ. ತರಕಾರಿ ಬಳಸಿ. ಕೈತೊಳೆಯುವ ಜಾಗ ಸ್ವಚ್ಚವಾಗಿರಲಿ ಆವರಣದ ಸುತ್ತೆಲ್ಲಾ ಟೈಲ್ಸ್‌ಗಳನ್ನು ಹಾಕಿಸಿ ಎಂದು ನಗರಸಭೆ ಇಂಜಿನಿಯರ್‌ಗೆ ಸೂಚಿಸಿದರು.

ಅಡುಗೆ ಕೋಣೆ ಹಾಗೂ ಪಾತ್ರೆ ಸಾಮಾನುಗಳನ್ನು ತೊಳೆಯುವ ಜಾಗವನ್ನು ವೀಕ್ಷಿಸಿ ಹೈಟೆಕ್ ಸಾಮಗ್ರಿಗಳಿವೆ. ಸರಿಯಾಗಿ ಬಳಸಿಕೊಳ್ಳಿ. ಸಿದ್ದಪಡಿಸಿದ ಉಪಹಾರ ಹಾಗೂ ಊಟವನ್ನು ತೆರೆದಿಡಬೇಡಿ. ಮೇಲೆ ಪ್ಲೇಟ್ ಮುಚ್ಚಬೇಕು. ಬಡವರ ಅನುಕೂಲಕ್ಕಾಗಿ ರಾಜ್ಯ ಸರ್ಕಾರ ಇಂದಿರಾ ಕ್ಯಾಂಟಿನ್ ತೆರೆದಿದೆ. ಯಾವುದೇ ಲೋಪವಾಗಬಾರದು. ಇಲ್ಲಿಗೆ ಬರುವವರಿಗೆ ಗುಣಮಟ್ಟದ ಆಹಾರ ಸಿಗಬೇಕು ಎಂದು ತಾಕೀತು ಮಾಡಿದರು.

ವಿಶ್ವ ವಿಕಲಚೇತನರ ದಿನಾಚರಣೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಅಂಗವಿಕಲರಿಗೆ ಅವಕಾಶ ನೀಡಿ

» ಚಿತ್ರದುರ್ಗ







ವಿಕಲಚೇತನರಿಗೆ ಅನುಕಂಪ ತೋರಿಸುವುದಕ್ಕಿಂತ ಮುಖ್ಯವಾಗಿ ನಾವು ಅವಕಾಶ ಕಲ್ಪಿಸಿಕೊಡಬೇಕು. ಆಗ ಮಾತ್ರ ವಿಕಲಚೇತನರು ಸಮಾಜದ ಮುಖ್ಯವಾಹಿನಿಗೆಬರಲುಸಾಧ್ಯವಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಮಂಗಳವಾರ ಸಮಗ್ರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ವಿಕಲಚೇತನ ವ್ಯಕ್ತಿಗಳಲ್ಲಿ ನಾಯಕತ್ವಕ್ಕೆ ಉತ್ತೇಜನ ಎಂಬ ಘೋಷವಾಕ್ಯದೊಂದಿಗೆ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಕಲಚೇತನರಿಗೆ ಅವಕಾಶ ಕೊಡದೇ ವಂಚಿತರನ್ನಾಗಿ ಮಾಡಬಾರದು. ಯಾವುದೇ ಕಾರಣಕ್ಕೂ ವಿಕಲಚೇತನರು ಎದೆಗುಂದಬಾರದು. ಉತ್ಸಾಹ, ಛಲ, ಧೈರ್ಯ, ಕಠಿಣ ಪರಿಶ್ರಮವಿದ್ದರೆ ಸಾಧನೆ ಮಾಡುವುದು ಕಷ್ಟವೇನಲ್ಲ. ಪ್ಯಾರಾ ಒಲಂಪಿಕ್, ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವಿಕಲಚೇತನರು ನಾವು ಯಾರಿಗೂ ಕಮ್ಮಿ ಇಲ್ಲ ಎಂಬಂತೆ ಸಾಧನೆ ಮಾಡಿರುವ ಉದಾಹಣೆಗಳಿವೆ ಎಂದು ಹೇಳಿದರು.ವಿಕಲಚೇತನರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಹಾಗೂ ಉದ್ಯೋಗದಲ್ಲಿಯೂ ಮೀಸಲಾತಿ ಮತ್ತು ಅವಕಾಶಗಳನ್ನು ಕಲ್ಪಿಸಿದ್ದು, ಅವುಗಳನ್ನು ಸದುಪಯೋಗ ಪಡಿಸಿಕೊಂಡು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಸಲಹೆ ನೀಡಿದರು.ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ವಿಕಲಚೇತನರು ತಮ್ಮ ದೈಹಿಕ ನ್ಯೂನತೆಗಳ ಬಗ್ಗೆ ಕೀಳರಿಮೆಯನ್ನು ಮನಸ್ಸಿನಿಂದ ತೊರೆದು, ನಾವು ಯಾರಿಗೂ ಕಮ್ಮಿ ಇಲ್ಲ ಎಂಬ ಭಾವನೆ ಹೊಂದಿರಬೇಕು. ವಿಕಲಚೇತನರಲ್ಲಿ ವಿಶೇಷ ಗುಣಗಳಿದ್ದು, ಕೌಶಲ್ಯಗಳಿದ್ದು, ಎಲ್ಲ ಕ್ಷೇತ್ರಗಳಲ್ಲಿಯೂ ಪಾಲ್ಗೊಳ್ಳಬೇಕು ಎಂದರು.ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್ ರಾಘವೇಂದ್ರ ಮಾತನಾಡಿ, ವಿಕಲಚೇತನರು ಮನೋಸ್ಥೈರ್ಯವನ್ನು ಬೆಳೆಸಿಕೊಳ್ಳುವ ಮೂಲಕ ಉನ್ನತ ಗುರಿ ಇರಿಸಿಕೊಂಡು ಅದರ ಸಾಕಾರಕ್ಕೆ ಯತ್ನಿಸಬೇಕು. ಅಂಗವಿಕಲರು ಪ್ರತಿಭಾವಂತರಾಗಿದ್ದು, ಮಾನಸಿಕವಾಗಿ ಸಬಲರಾಗುವ ಮೂಲಕ ದೈಹಿಕ ನ್ಯೂನತೆಗಳನ್ನು ಮೆಟ್ಟಿನಿಂತು ಸಾಧನೆ ಮಾಡಬೇಕು ಎಂದು ಹೇಳಿದರು.

ಮಹಿಳಾಮತ್ತುಮಕ್ಕಳಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್.ಬಣಕಾರ್ ಮಾತನಾಡಿ, ಅಂಗವಿಕಲರು ಕ್ರೀಡಾ ಮತ್ತು ಸಾಂಸ್ಕೃತಿಕ, ಶೈಕ್ಷಣಿಕ ಕ್ಷೇತ್ರಗಳು ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿಯೂ ವಿಶೇಷವಾದ ಸಾಧನೆ ತೋರಿದ್ದಾರೆ. ವಿಶೇಷ ಚೇತನರಿಗೆ ಅನುಕಂಪ, ತಾತ್ಸಾರಕ್ಕಿಂತ ಅವಕಾಶ ಕಲ್ಪಿಸಬೇಕು. ಸಾಮಾನ್ಯ ಮನುಷ್ಯರಿಗಿಂತ ಅಂಗವಿಕಲರಲ್ಲಿ ವಿಶೇಷವಾದ ಶಕ್ತಿ ಇರುತ್ತದೆ ಎಂದು ಹೇಳಿದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಮಾತನಾಡಿ, 2011ರ ಜನಗಣತಿ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 35,971 ಜನ ವಿಕಲಚೇತನರು ಇದ್ದಾರೆ. ವಿಕಲಚೇತನರು ಮುಖ್ಯವಾಹಿನಿಗೆಯಲ್ಲಿ ಸಾಮಾನ್ಯರಂತೆ ಜೀವಿಸಲು ಅನುಕೂಲವಾಗುವಂತೆ ಎಲ್ಲಾ ರೀತಿಯ ಅಡೆತಡೆರಹಿತ ಸೌಲಭ್ಯ ಮತ್ತು ನೆರವು ನೀಡುವುದು ಸರ್ಕಾರ ಹಾಗೂ ಸಮುದಾಯದ ಜವಾಬ್ದಾರಿಯಾಗಿರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಮೂಲಕ ಸೌಲಭ್ಯಗಳನ್ನು ಒದಗಿಸುವಮೂಲಕಎಲ್ಲಾವಿಕಲಚೇತನರು ಮುಖ್ಯವಾಹಿನಿಗೆ ಬರುವಲ್ಲಿ ಹಲವಾರು ಕಾರ್ಯಕ್ರಮಗಳನ್ನುಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.ವಿಕಲಚೇತನರಿಗೆ ಮಾಸಿಕ ನಿರ್ವಹಣಾ ಭತ್ಯೆ, ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಸಾಧನ ಸಲಕರಣೆಗಳು, ಆಧಾರ ಸ್ವಯಂ ಉದ್ಯೋಗ ಯೋಜನೆ, ವಿಕಲಚೇತನ ವ್ಯಕ್ತಿಯನ್ನು ಸಾಮಾನ್ಯ ವ್ಯಕ್ತಿ ವಿವಾಹವಾದಲ್ಲಿ ಪ್ರೋತ್ಸಾಹಧನ, ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ, ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಶಿಶುಪಾಲನಾ ಭತ್ಯೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ವಾಹನ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ಬ್ರೈಲ್ ಕಿಟ್ ಯೋಜನೆ,ಶ್ರವಣದೋಷವಿಕಲಚೇತನರಿಗೆ ಹೊಲಿಗೆಯಂತ್ರ ಯೋಜನೆ.

ಪುಟ 2

## ಶ್ರೀಚಳ್ಳಕೆರೆಯಮ್ಮ ಸನ್ನಿಧಿಯಲ್ಲಿ ಕಾರ್ತಿಕಮಹೋತ್ಸವ

» ಚಳ್ಳಕೆರೆ

ಗ್ರಾಮ ದೇವತೆ ಚಳ್ಳಕೆರೆಯಮ್ಮ ದೇವಸ್ಥಾನದಲ್ಲಿ ಕಡೆ ಕಾರ್ತಿಕ ಹಿನ್ನೆಲೆಯಲ್ಲಿ ವಿಶೇಷವಾದ ಪೂಜಾ ಕಾರ್ಯಕ್ರಮಗಳನ್ನು ದೇವಸ್ಥಾನ ಆಡಳಿತ ಮಂಡಳಿ ಭಕ್ತರ ಸಹಕಾರದಿಂದ ಕೈಗೊಂಡಿದ್ದರು. ಶ್ರೀದೇವಿಗೆ ವಿಶೇಷ ಹೂವಿನ ಅಲಂಕಾರ ಮಾಡಿದ್ದಲ್ಲದೆ, ದೇವಸ್ಥಾನವನ್ನು ಸಹ ಹೂಗಳಿಂದ ಸಿಂಗರಿಸಲಾಗಿತ್ತು. ಮಂಗಳವಾರ ಸಂಜೆ ಸಾವಿರಾರು ಮಹಿಳಾ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡಿ ಅಮ್ಮನ ದರ್ಶನ ಪಡೆದರು. ಇಡೀ ದೇವಸ್ಥಾನ ಆವರಣವೆಲ್ಲಾ ಭಕ್ತರಿಂದ ತುಂಬಿತ್ತು. ಆಗಮಿಸಿದ ಎಲ್ಲಾ ಭಕ್ತರಿಗೆ ದೇವಸ್ಥಾನದ ಆಡಳಿತ ಮಂಡಳಿ ಪ್ರಸಾದ ವಿತರಿಸಿದರು.

ಪ್ರತಿವರ್ಷವೂ ಶ್ರೀಚಳ್ಳಕೆರೆಯಮ್ಮನಿಗೆ ಕಾರ್ತಿಕಮಾಸದ ಹಿನ್ನೆಲೆಯಲ್ಲಿ ವಿಶೇಷವಾದ ಪೂಜೆಯನ್ನು ಹಮ್ಮಿಕೊಳ್ಳುತ್ತಾ ಬಂದಿದ್ದು, ಈ ಬಾರಿಯೂ ಸಹ ಶ್ರೀದೇವಿಯ ಉತ್ಸವ ಮೂರ್ತಿಯನ್ನು ಅಲಂಕರಿಸಿ ಪ್ರಾಂಗಣದಲ್ಲೇ ಭಕ್ತರ ದರ್ಶನಕ್ಕಾಗಿ ಇಟ್ಟಿದ್ದು, ದೇವಸ್ಥಾನದ ಒಳಗೆ, ಹೊರಗೆ ಭಕ್ತರು ನಿರಂತರವಾಗಿ ಆಗಮಿಸಿ ದೇವಿಯ ದರ್ಶನ ಪಡೆದರು. ಸಂಜೆ ವೇಳೆ ಜಿಟಿಜಿಟಿ ಮಳೆ ಆರಂಭವಾದರೂ ಸಹ ಭಕ್ತರು ದೇವಿಯ ದರ್ಶನ ಪಡೆದರು. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ದೇವಸ್ಥಾನಕ್ಕೆ ಆಗಮಿಸಿ ದೇವಿಯ ದರ್ಶನ ಪಡೆದರು. ಪ್ರತಿವರ್ಷ ಕಾರ್ತಿಕಮಾಸದ ಪೂಜೆಗೆ ತಪ್ಪದೆ ಆಗಮಿಸುವುದಾಗಿ ತಿಳಿಸಿದ ಅವರು, ಈ ಬಾರಿ ದೇವಿಯ ಕೃಪೆಯಿಂದ ನಮ್ಮ ಜಿಲ್ಲೆಯಾದ್ಯಂತ ಉತ್ತಮ ಮಳೆಯಾಗಿದೆ. ಯಾವ ಭಾಗದಲ್ಲೂ ನೀರಿನ ಆಹಾಕಾರವಿಲ್ಲ. ಎಲ್ಲರಲ್ಲೂ ಸಂತಸ ಮನೆ ಮಾಡಿದೆ. ಈ ವರ್ಷವೂ ಉತ್ತಮ ಮಳೆ, ಬೆಳೆ ಕರುಣಿಸುವಂತೆ ದೇವಿಯಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.



ಚಳ್ಳಕೆರೆ ನಗರದ ಗ್ರಾಮ ದೇವತೆ ಚಳ್ಳಕೆರೆಯಮ್ಮ ದೇವಸ್ಥಾನದಲ್ಲಿ ಕಾರ್ತಿಕ ಹಿನ್ನೆಲೆಯಲ್ಲಿ ದೀಪಾಲಂಕಾರ ಮಾಡಲಾಗಿತ್ತು.

## ಪ್ರಮುಖ ಸುದ್ದಿ

# ಹೋಬಳಿ ವ್ಯಾಪ್ತಿಯಲ್ಲಿ ಬೆಸ್ಕಾಂನ ನೂತನ ಶಾಖೆ, ಆಸ್ಪತ್ರೆ ಕಟ್ಟಡ, ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ಶಾಸಕ

» ಪರಶುರಾಂಪುರ

ಆಂಧ್ರಾ ಹಾಗೂ ಜಿಲ್ಲಾಗಡಿ ಭಾಗದಲ್ಲಿರುವ ದೊಡ್ಡಬೀರನಹಳ್ಳಿ ಬೆಸ್ಕಾಂ ಇಲಾಖೆಯ ಶಾಖೆಯುರೈತರಿಗೆಅತಿ ಮುಖ್ಯ ವಾಗಿರುತ್ತದೆ.

ಗುಣಮಟ್ಟದೊಂದಿಗೆ ನಿಗದಿತ ಕಾಲ ಮಿತಿಯೊಳಗೆ ಕಾಮಗಾರಿಅಗತ್ಯ ಸೌಲಭ್ಯಗಳನ್ನೊಳಗೊಂಡಿರಲಿ ಎಂದುಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಹೋಬಳಿಯ ದೊಡ್ಡಬೀರನಹಳ್ಳಿಗ್ರಾಮದಲ್ಲಿನೂತನ ಬೆಸ್ಕಾಂ ಇಲಾಖೆಯ ಶಾಖೆಯಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ತಾಲೂಕಿನ ಮತದಾರರು ಮೂರನೇ ಬಾರಿಗೆ ಶಾಸಕರಾಗಿಆಯ್ಕೆ ಮಾಡಿದ್ದೀರಿ,ಸರ್ಕಾರದಗ್ಯಾರಂಟಿ ಜತೆಅಭಿವೃದ್ಧಿ ಕಾರ್ಯಗಳನ್ನ ಕೈಗೊಳ್ಳುವ ಸಲುವಾಗಿ ಹೋಬಳಿ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಲಾಗುವುದು.ಈ ಭಾಗದರೈತರ ಬಹು ದಿನಗಳ ಬೇಡಿಕೆಗೆ ಸಂತಸತಂದಿದೆಎಂದರು.



ಈಸಂದರ್ಭದಲ್ಲಿ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶಶಿಧರ, ಬೆಸ್ಕಾಂ ಎ.ಇ. ರಾಮಚಂದ್ರಪ್ಪ, ಎ.ಇ.ಇ. ಶಿವಪ್ರಸಾದ್, ಗ್ರಾಮ ಪಂಚಾಯಿತಿಅಧ್ಯಕ್ಷರಾದಜಯಮ್ಮ,ಗ್ರಾಮಪಂಚಾಯಿತಿ ಸದಸ್ಯರುಗಳು, ತಾಲ್ಲೂಕು ಪಂಚಾಯತ್‌ಕೆಡಿಪಿ ನಾಮ ನಿರ್ದೇಶನ ಸದಸ್ಯ ಬಸವರಾಜ್,ಜಿಲ್ಲಾಗ್ಯಾರೆಂಟಿ ಸಮಿತಿಯ ಸದಸ್ಯಚನ್ನಕೇಶವ, ಗ್ಯಾರೆಂಟಿ ಸಮಿತಿಯ ಸದಸ್ಯ ಅನಿಲ್ ಕುಮಾರ್, ಮುಖಂಡರುಗಳಾದ ಬೋಪಣ್ಣ, ಸುರೇಶ್, ಜಯಣ್ಣ, ಪ್ರಸನ್ನಕುಮಾರ್, ನಾಗರಾಜ್, ಹೊನ್ನಪ್ಪ, ಕೃಷ್ಣಮೂರ್ತಿ, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.ದೊಡ್ಡಚೆಲ್ಲೂರುಗ್ರಾಮದಲ್ಲಿ ಪ್ರಾಥಮಿಕಆರೋಗ್ಯಕೇಂದ್ರಕ್ಕೆ ನಾಲ್ಕು ಕೋಟಿ ವೆಚ್ಚದಲ್ಲಿ ನೂತನಕಟ್ಟಕ್ಕೆ ಭೂಮಿ ಪೂಜೆ ನೆರವೇರಿಸಿದರು.

ಡಿಹೆಚ್‌ಓರೇಣುಕಾ ಪ್ರಸಾದ್, ಟಿ.ಹೆಚ್.ಓ ಕಾಶಿ , ತಿಪ್ಪೇಸ್ವಾಮಿ,ಡಾ.ಕುಬೇರ ಮುಖಂಡರುಗಳಾದ ಬೋಪಣ್ಣ, ಸುರೇಶ್, ಜಯಣ್ಣ, ಪ್ರಸನ್ನಕುಮಾರ್, ನಾಗರಾಜ್, ಹೊನ್ನಪ್ಪ, ಕೃಷ್ಣಮೂರ್ತಿ, ತಿಮ್ಮಣ್ಣ, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.ಪ 'ರಶುರಾಂಪುರದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಕರ್ನಾಟಕಗ್ರಾಮೀಣರಸ್ತೆಅಭಿವೃದ್ಧಿ ಸಂಸ್ಥೆ ವತಿಯಿಂದ ಚಳ್ಳಕೆರೆ ತಾಲೂಕಿನ ಪರಶುರಾಂಪುರಗ್ರಾಮದಲ್ಲಿ ನಡೆದ ಸುಮಾರು 225.00ಲಕ್ಷ ರೂ.ಗಳ ವೆಚ್ಚದಲ್ಲಿ 2023–24 ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿಕಾರ್ಯಕ್ರಮದಡಿ ಚಳ್ಳಕೆರೆ ತಾಲ್ಲೂಕಿನ ಪರಶುರಾಂಪುರಗ್ರಾಮದಿಂದ ಸಿರಿಮಜ್ಜನಪಲ್ಲಿ (ಆಂಧ್ರಗಡಿ) ವರೆಗೆರಸ್ತೆಅಭಿವೃದ್ಧಿಕಾಮಗಾರಿಯ ಹಾಗೂ ಜಾಜೂರು ಮುಖ್ಯರಸ್ತೆಯಿಂದಕರೇಕಲ್‌ಗೊಲ್ಲರಹಟ್ಟಿ ವರೆಗೆರಸ್ತೆಅಭಿವೃದ್ಧಿ ಮತ್ತುಡಾಂಬರೀಕರಣಕಾರ್ಯಕ್ರಮದ ಭೂಮಿ ಪೂಜಾ ನೆರವೇರಿಸಿದರು.

ಈ ಸಂದರ್ಭದಲ್ಲಿಗ್ರಾಮ ಪಂಚಾಯಿತಿಅಧ್ಯಕ್ಷ ಜಗಳೂರುಸ್ವಾಮಿ, ಕೆಡಿಪಿ ನಾಮ ನಿರ್ದೇಶನ ಸದಸ್ಯ ಬಸವರಾಜ್, ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಶಶಿಧರ, ಮುಖಂಡರುಗಳಾದ ಚನ್ನಕೇಶವ, ಸುರೇಶ್, ಬಸವರಾಜ್, ಪ್ರಸನ್ನಕುಮಾರ್, ನಾಗರಾಜ್, ರುದ್ರೇಶ್, ನಾಗಭೂಷಣ,ಕರಿಯಣ್ಣ,ಪ್ರಕಾಶ್,ರಮೇಶ್,ಬೊಮ್ಮಕ್ಕ, ಅನಿತಾ, ಮಂಜುಳಾ, ರಂಗಸ್ವಾಮಿ, ಜಯಕುಮಾರ್, ಪ್ರಕಾಶ್,ಕೃಷ್ಣಪ್ಪ, ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅಂಗವಿಕಲರಿಗೆ ಅವಕಾಶ ನೀಡಿ: ಎಡಿಸಿ

» ಮೊದಲ ಪುಟದಿಂದ

ಆರೈಕೆದಾರರ ಪ್ರೋತ್ಸಾಹಧನ ಯೋಜನೆ, ವಿಕಲಚೇತನರಿಗೆ ರಿಯಾಯಿತಿ ಬಸ್‌ಪಾಸ್ ವ್ಯವಸ್ಥೆ, ಉದ್ಯೋಗದಲ್ಲಿ ಮೀಸಲಾತಿ ಎ ಮತ್ತು ಬಿ ವೃಂದಕ್ಕೆ ಶೇ.4ರಷ್ಟು ಹಾಗೂ ಸಿ ಮತ್ತು ಡಿ ವೃಂದಕ್ಕೆ ಶೇ.5ರಷ್ಟು ಮೀಸಲಾತಿ ಕಲ್ಪಿಸಲಾಗಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ವಿಶ್ವ ವಿಕಲಚೇತರ ದಿನಾಚರಣೆ ಅಂಗವಾಗಿ 2023–24ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದ ವಿಕಲಚೇತನ ವಿದ್ಯಾರ್ಥಿಗಳನ್ನು ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಸಾಧನೆ ತೋರಿದ ವಿಕಲಚೇತನ ವಿದ್ಯಾರ್ಥಿ ಈ ಶ್ರೀಹರಿ ಅವರನ್ನು ಗೌರವಿಸಲಾಯಿತು. ನಂತರ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಜಿಲ್ಲಾಮಟ್ಟದಲ್ಲಿ ವಿಕಲಚೇತನರಿಗೆ ಹಮ್ಮಿಕೊಂಡಿದ್ದ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿಜೇತರಾದ ವಿಕಲಚೇತನರಿಗೆ ಬಹುಮಾನ ವಿತರಿಸಲಾಯಿತು. ನಂತರ ವಿಕಲಚೇತನ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ, ಚಿತ್ರದುರ್ಗ ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ದಿನಕರ್, ವಿಕಲ ಚೇತನರ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಶ್ರೀನಿವಾಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಪವಿತ್ರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ ಸೇರಿದಂತೆ ವಿವಿದೋದ್ದೇಶ, ನಗರ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ವಿಕಲಚೇತನರು ಇದ್ದರು.

### ಜಿಲ್ಲಾ ಕ್ರೀಡಾರೋಹಣದ ಕ್ರೀಡಾಪಟುಗಳ ಸಾಧನೆ

» ದಾವಣಗೆರೆ

ರಿಂದ ಡಿ.2 ರವರೆಗೆ ಬೆಂಗಳೂರಿನಲ್ಲಿ ನಡೆದ 28ನೇ ಸೌತ್ ಝೋನ್ ಚಾಂಪಿಯನ್‌ಷಿಪ್‌ನಲ್ಲಿ ದಾವಣಗೆರೆ ಜಿಲ್ಲಾ ಕ್ರೀಡಾರೋಹಣದ ಕ್ರೀಡಾಪಟುಗಳು ಭಾಣಸ್ಯ ಡಿ. ದ್ವಿತೀಯ ಸ್ಥಾನ ಮತ್ತು ಗಂಗಾ ವೈಷ್ಣವಿ ವಿ. ನಾಗ್ ತೃತೀಯ ಸ್ಥಾನವನ್ನು ಪಡೆದು ಜ್ಯೂನಿಯರ್ ವಿಭಾಗದಲ್ಲಿ ಉತ್ತಮ ಸಾಧನೆ ಮಾಡಿರುತ್ತಾರೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ರೇಣುಕಾದೇವಿ ತಿಳಿಸಿದ್ದಾರೆ.

### ಕಿಶೋರರನ್ನು ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ

» ದಾವಣಗೆರೆ

ದಾವಣಗೆರೆ ಜಿಲ್ಲಾದ್ಯಂತ ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಪದ್ಧತಿ ನಿರ್ಮೂಲನೆ ವಿವಿಧ ಅಂಗಡಿ, ಹೋಟೆಲ್, ಗ್ಯಾರೇಜ್, ಬಾರ್ ಮತ್ತು ರೆಸ್ಟೋರೆಂಟ್ ಹಾಗೂ ವಾಣಿಜ್ಯ ಸಂಸ್ಥೆಗಳು ಹಾಗೂ ಮಂಡಕ್ಕಿ ಭಟ್ಟಿ, ಇಟ್ಟಂಗಿ ಭಟ್ಟಿಕಲ್ಲಿನ ಕೋರೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುತ್ತಿರುವುದು ಕಂಡು ಬರುತ್ತಿದೆ. 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಹಾಗೂ ಸಂಜ್ಞೆಯ(ವಾರೆಂಟ್‌ರಹಿತ ಬಂದಿಸಬಹುದಾದ) ಅಪರಾಧವಾಗಿದೆ. ಹಾಗೂ ಕೆಲಸಕ್ಕೆ ನೇಮಿಸಿಕೊಂಡಲ್ಲಿ ಅಂತಹ ಮೊದಲ ಅಪರಾಧಕ್ಕೆ ಮಾಲೀಕರಿಗೆ 6 ತಿಂಗಳಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ರೂ.20,000/– ರಿಂದ ರೂ.50,000/– ಗಳ ವರೆಗೆ ದಂಡ ಅಥವಾ ಎರಡನ್ನೂ ವಿಧಿಸಲಾಗುವುದು. ಪುನರಾವರ್ತಿತ ಅಪರಾಧಕ್ಕೆ 1 ವರ್ಷದಿಂದ 3 ವರ್ಷಗಳವರೆಗೆ ಜೈಲುಶಿಕ್ಷೆ, ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಪದ್ಧತಿಯನ್ನು ಪ್ರೋತ್ಸಾಹಿಸುವ ಪೋಷಕರಿಗೂ ಸಹ ಲಘು ಶಿಕ್ಷಾ ಅವಕಾಶವಿದ್ದು, ಪುನರಾವರ್ತಿತ ಅಪರಾಧಕ್ಕೆ ರೂ. 10,000/–ಗಳ ದಂಡ. 14 ವರ್ಷದೊಳಗಿನ ಮಕ್ಕಳು ಯಾವುದೇ ಉದ್ಯೋಗ ಅಥವಾ ಪ್ರಕ್ರಿಯೆಗಳಲ್ಲಿ ಹಾಗೂ 18 ವರ್ಷವಯಸ್ಸಿನವರೆಗಿನ ಕಿಶೋರರು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸ ಮಾಡುವುದು ಕಂಡು ಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ–1098, ಕಾರ್ಮಿಕ ಇಲಾಖೆ 08192–230094–237332 ಸಂಪರ್ಕಿಸಲು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.




ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಯೋಜನೆಯಡಿ ಜಿಲ್ಲಾಸ್ಪತ್ರೆಗೆ ಅಂಬ್ಯುಲೆನ್ಸ್ ವಾಹನ ನೀಡಿದ ಹೊಳಲ್ಕೆರೆ ಶಾಸಕ

---

**ಪೂರ್ವಸಿದ್ಧತಾ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿಕೆ –ಪರೀಕ್ಷಾ ಕೇಂದ್ರಗಳಲ್ಲಿ ತಪಾಸಣೆಗೆ ಹೆಚ್ಚುವರಿ ಪೊಲೀಸ್ ನೇಮಕ**

# 7, 8ರಂದು ಪಿಡಿಓ ನೇಮಕಾತಿ ಪರೀಕ್ಷೆ; ಡಿಸಿ

» ಚಿತ್ರದುರ್ಗ

ಡಿ.7 ಮತ್ತು 08 ರಂದು ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ವತಿಯಿಂದ ಪಂಚಾಯತಿ ಅಭಿವೃದ್ಧಿ ಅಧಿಕಾರಿ(ಪಿಡಿಓ) ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಯಲಿದೆ. ಜಿಲ್ಲೆಯ ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳ ತಪಾಸಣೆಗೆ ಅನುಕೂಲವಾಗುವಂತೆ ಹೆಚ್ಚುವರಿ ಪೊಲೀಸರನ್ನು ನೇಮಿಸಲು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಈ ಕುರಿತು ಜರುಗಿದ ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು

ನೇಮಕಾತಿ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳ ಭವಿಷ್ಯ ಅಡಗಿದೆ. ಯಾವುದೇ ಗೊಂದಲ ಹಾಗೂ ಅಕ್ರಮಗಳಿಗೆ ಎಡೆ ಮಾಡಿಕೊಡದಂತೆ ಪರೀಕ್ಷಾ ಕಾರ್ಯ ನಡೆಸಬೇಕು. ಪರೀಕ್ಷಾ ಸಂಬಂಧ ಕೆಪಿಎಸ್‌ಸಿ ನೀಡಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲನೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಾಕೀತು ಮಾಡಿದರು.

ಮೊಬೈಲ್, ಬ್ಲೂಟೂತ್ ಮತ್ತು ಆಧುನಿಕ ಸಂವಹನದ ಉಪಕರಣ ಬಳಸಿ ಪರೀಕ್ಷಾ ಅಕ್ರಮ ಮಾಡುವುದನ್ನು ತಡೆಯಲು ಅಭ್ಯರ್ಥಿಗಳನ್ನು ಸಂಪೂರ್ಣವಾಗಿ ತಪಾಸಣೆ ನಡೆಸಬೇಕು. ಕೆ.ಪಿ.ಎಸ್.ಸಿ ವತಿಯಿಂದ ತಪಾಸಣೆಗೆ ವ್ಯಕ್ತಿಗಳನ್ನು ನಿಯೋಜನೆ ಮಾಡುವುದಾಗಿ ತಿಳಿಸಿದ್ದಾರೆ.



ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ತಪಾಸಣೆಗಾಗಿ ಪ್ರತ್ಯೇಕ ತಂಡ ರಚಿಸಬೇಕು. ಪ್ರತಿ ಪರೀಕ್ಷಾ ಕೇಂದ್ರಗಳಿಗೂ ಮಹಿಳಾ ಅಭ್ಯರ್ಥಿಗಳ ತಪಾಸಣೆಗೆ ಅನುಕೂಲವಾಗುವಂತೆ ಹೆಚ್ಚುವರಿ ಮಹಿಳಾ ಪೊಲೀಸರನ್ನು ತಪ್ಪದೇ ನೇಮಿಸಬೇಕು. ಅಕ್ರಮ ತಡೆಯಲು ಪರೀಕ್ಷಾ ಕೇಂದ್ರಗಳಲ್ಲಿ ಜಾಮರ್ ಹಾಗೂ ಪರೀಕ್ಷಾ ನಡೆಯುವ ಕೊಠಡಿಗಳಲ್ಲಿ ಸಿ.ಸಿ.ಟಿ.ವಿ ಈಗಾಗಲೇ ಅಳವಡಿಸಲು ಸೂಚನೆ ನೀಡಲಾಗಿದೆ. ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಜಾಮರ್, ಸಿ.ಸಿ.ಟಿ.ವಿ ಕ್ಯಾಮೆರಾಗಳು ಸುಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿವೆಯೇ ಎಂಬುದನ್ನು ಖಾತ್ರಿ ಪಡಿಸಿಕೊಳ್ಳಬೇಕು ಎಂದು ನಿರ್ದೇಶಿಸಿದರು.

ಪರೀಕ್ಷಾ ಕೇಂದ್ರದ ಸುತ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು. ಇದಕ್ಕೆ ಪೂರಕವಾಗಿ ಪರೀಕ್ಷಾ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ 144 ಸೆಕ್ಷನ್ ಜಾರಿಗೊಳಿಸಲಾಗುವುದು. ಖಜಾನೆ ಅಧಿಕಾರಿ, ಮಾರ್ಗಾಧಿಕಾರಿಗಳು, ಪರೀಕ್ಷಾ ಕೇಂದ್ರದ ಮುಖ್ಯಸ್ಥರು ಹಾಗೂ ಕೊಠಡಿ ಮೇಲ್ವಿಚಾರಕು ಪ್ರಶ್ನೆಪತ್ರಿಕೆ ಹಾಗೂ ಓಎಂಆರ್ ನಿರ್ವಹಣೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು. ಪರೀಕ್ಷಾ ಕೇಂದ್ರದಲ್ಲಿ ಹೆಲ್ತ್ ಸ್ಕ್ರೀನಿಂಗ್ ಕೌಂಟರ್ ಸ್ಥಾಪಿಸಿ, ಆರೋಗ್ಯ ತಪಾಸಣೆಗಾಗಿ ಆರೋಗ್ಯ ಸಹಾಯಕರನ್ನು ನಿಯೋಜಿಸಬೇಕು ಎಂದರು.

ಪರೀಕ್ಷಾ ಕಾರ್ಯ ಮುಗಿದ ನಂತರ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ಅಂಚೆ ಕಚೇರಿಯ ಮೂಲಕ ಆಯೋಗಕ್ಕೆ ಸುರಕ್ಷಿತವಾಗಿ ತಲುಪಿಸಬೇಕು. ಪರೀಕ್ಷೆ ಶನಿವಾರ ಹಾಗೂ ಭಾನುವಾರ ನಡೆಯುವುದರಿಂದ ಎಲ್ಲಾ ಪರೀಕ್ಷಾ ಕೇಂದ್ರಗಳ ಬಳಿ ಇರುವ ಅಂಚೆ ಕೆಚೇರಿಯಗಳನ್ನು ತೆರೆದು, ಬಂಡಲ್‌ಗಳನ್ನು ಸ್ವೀಕರಿಸಬೇಕು ಎಂದು ಜಿಲ್ಲಾಧಿಕಾರಿ ಅಂಚೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಚಳ್ಳಕೆರೆ ತಹಶೀಲ್ದಾರ್ ರೆಹಮಾನ್ ಪಾಷ, ಡಿವೈಎಸ್‌ಪಿ ದಿನಕರ್, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು, ಜಿಲ್ಲಾ ಖಜನಾಧಿಕಾರಿ, ಅಂಚೆ ಇಲಾಖೆ ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು ಸಬೆಯಲ್ಲಿ ಭಾಗವಹಿಸಿದ್ದರು.

### 40 ಪರೀಕ್ಷೆ ಕೇಂದ್ರ : 14614 ಅಭ್ಯರ್ಥಿಗಳು

ಜಿಲ್ಲೆಯ ಚಿತ್ರದುರ್ಗ ಹಾಗೂ ಚಳ್ಳಕೆರೆ ನಗರದ 40 ಕೇಂದ್ರಗಳಲ್ಲಿ ಪಿಡಿಓ ನೇಮಕಾತಿ ಪರೀಕ್ಷೆ ನಡೆಯಲಿದ್ದು, ಒಟ್ಟು 14614 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಡಿಸೆಂಬರ್ 7ರಂದು ಮಧ್ಯಾಹ್ನ 2 ರಿಂದ 4 ಗಂಟೆ ರವರೆಗೆ ಕನ್ನಡ ಭಾಷಾ ಪರೀಕ್ಷೆ ನಡೆಯಲಿದೆ. ಡಿ.8 ರಂದು ಬೆಳಿಗ್ಗೆ 10 ಗಂಟೆಯಿಂದ 11:30 ವರೆಗೆ ಪತ್ರಿಕೆ–1ರ ಸಾಮಾನ್ಯ ಜ್ಞಾನ ಹಾಗೂ ಮಧ್ಯಾಹ್ನ 2 ರಿಂದ 4 ಗಂಟೆ ರವರೆಗೆ ಪತ್ರಿಕೆ–2ರ ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲಿಷ್, ಕಂಪ್ಯೂಟರ್ ಜ್ಞಾನ ವಿಷಯಗಳ ಪರೀಕ್ಷೆಯು ನಡೆಯಲಿದೆ. ಮಾರ್ಗಾಧಿಕಾರಿಗಳು, ಸೂಕ್ಷ್ಮ ವೀಕ್ಷಕರನ್ನು ಪರೀಕ್ಷಾ ಕೇಂದ್ರಗಳಿಗೆ ನೇಮಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೂ ಈಗಾಗಲೇ ಎಲ್ಲಾ ನಿರ್ದೇಶನಗಳನ್ನು ನೀಡಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಸಭೆಯಲ್ಲಿ ಮಾಹಿತಿ ನೀಡಿದರು.

---

# ಬಿ.ಸೃಜನಾಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ

» ದಾವಣಗೆರೆ

ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪ್ರತಿ ವರ್ಷದಂತೆ ಈ ವರ್ಷವೂ ನಗರ ಪಾಲಿಕೆಯಿಂದ ಕೊಡ ಮಾಡುವ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ದಾವಣಗೆರೆಯ ಪ್ರತಿಷ್ಠಿತ ಶಾಲೆಗಳಲ್ಲಿ ಒಂದಾದ ಗುರುಕುಲ ವಸತಿಯುತ ಶಾಲೆಯ ವಿದ್ಯಾರ್ಥಿನಿ ಬಿ. ಸೃಜನಾ ಅವರು ಭಾಜನರಾಗಿದ್ದಾರೆ.

ನವೆಂಬರ್ 29ರ ಶುಕ್ರವಾರ ಸಂಜೆ ನಗರ ಪಾಲಿಕೆಯಿಂದ ಹಮ್ಮಿಕೊಳ್ಳಲಾಗಿದ್ದ ಕನ್ನಡ ರಾಜ್ಯೋತ್ಸವದಲ್ಲಿ ಬಿ. ಸೃಜನಾಗೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಿದರು.

ಮಕ್ಕಳ ದಿನಾಚರಣೆಯ ಕಾರ್ಯಕ್ರಮದಲ್ಲಿ 2024–25ನೇ ಸಾಲಿನಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಿನ್ನೆಲೆ ಮುಖ್ಯಮಂತ್ರಿಗಳಿಂದ ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಿಂದ ಹಲವಾರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿನಿಯರಿಗೆ ಸನ್ಮಾನಿಸುವ ಕಾರ್ಯಕ್ರಮಕ್ಕೆ ಗುರುಕುಲ ಶಾಲೆಯ ಸೃಜನ ಬಿ. ಹಾಗೂ ಮಿನಾಲ್ ಇವರಿಬ್ಬರನ್ನು ಆಯ್ಕೆ ಮಾಡಲಾಗಿತ್ತು.

ಅಂತರರಾಷ್ಟ್ರೀಯ ಮಟ್ಟದ ಫ್ಯಾಷನ್ ಮಾಡ್ಲಿಂಗ್ ನಲ್ಲಿ ಎರಡನೇ ಸ್ಥಾನ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಫ್ಯಾಷನ್ ಮಾಡೆಲ್ ಸ್ಪರ್ಧೆಯಲ್ಲಿ 13 ಬಾರಿ ಜಯ, 3 ಬಾರಿ ದ್ವಿತೀಯ ಸ್ಥಾನ, 15 ಬಾರಿ ಟೈಟಲ್ ಹೋಲ್ಡರ್ ಪಡೆದಿದ್ದಾರೆ. ರಾಜ್ಯ ಮತ್ತು ರಾಷ್ಟ್ರ ಮಟ್ಟದ ನೃತ್ಯ ಸ್ಪರ್ಧೆಯಲ್ಲಿ 10 ಗೋಲ್ಡ್ ಮೆಡಲ್, 6 ಸಿಲ್ವರ್ ಮೆಡಲ್, 2 ಬ್ರೌನ್ಸ್ ಮೆಡಲ್ ಪಡೆದಿದ್ದಾರೆ. ರಾಷ್ಟ್ರೀಯ ಮಟ್ಟದ ಕರಾಟೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಈ ಎಲ್ಲ ಪ್ರಶಸ್ತಿಗಳು ಒಟ್ಟುಗೂಡಿಸಿದರೆ 25 ಗೋಲ್ಡ್ ಮೆಡಲ್, 30 ಸಿಲ್ವರ್ ಮೆಡಲ್, 10 ಬ್ರೌನ್ಸ್ ಮೆಡಲ್ ಗಳ ಪಡೆದು ಉತ್ತಮ ಸಾಧನೆ ಮಾಡಿದ್ದು, ಇವುಗಳನ್ನು ಗುರುತಿಸಿ ಸೃಜನಾಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗಿದೆ. ಗುರುಕುಲ ವಸತಿಯುತ ಶಾಲೆ ಅಧ್ಯಕ್ಷ ಆರ್. ಅಬ್ದುಲ್ ಸೇರಿದಂತೆ ಶಾಲಾ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗ ಮತ್ತು ಶಾಲಾ ಪೋಷಕರು. ವಿದ್ಯಾರ್ಥಿನಿಗೆ ಅಭಿನಂದಿಸಿದ್ದಾರೆ.



### ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ವ್ಯಾಪಕ ಬೆಂಬಲ : ಭೂಲಿಂಗಪ್ಪ



» ಚಳ್ಳಕೆರೆ

ಗ್ರಾಮೀಣ ಪ್ರದೇಶಗಳಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯತ್ವವನ್ನು ಪಡೆಯಲು ಸ್ವಯಂ ಪ್ರೇರಣೆಯಿಂದ ಜನರು ಮುಂದೆ ಬರುತ್ತಿರುವುದು ಸಂತಸ ತಂದಿದೆ. ಸದಸ್ಯತ್ವ ಅಭಿಯಾನಕ್ಕೆ ಉತ್ತಮ ಪ್ರಕ್ರಿಯೆ ವ್ಯಕ್ತವಾಗಿದ್ದು ಪಕ್ಷವನ್ನು ಬಲಪಡಿಸಲು ಸದಸ್ಯತ್ವ ಅಭಿಯಾನ ಸಹಕಾರಿ ಎಂದು ಬಿಜೆಪಿ ಮಾಜಿ ಮಂಡಲಾಧ್ಯಕ್ಷ ಎಚ್.ಡಿ.ಭೂಲಿಂಗಪ್ಪ ತಿಳಿಸಿದರು.

ದೇವರಮರಿಕುಂಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಡೇರಹಳ್ಳಿ, ಬೊಂಬೇರಹಳ್ಳಿ ಯಲಗಟ್ಟೆ, ಗೊಲ್ಲರಹಟ್ಟಿ ಗ್ರಾಮಗಳಲ್ಲಿ ಸದಸ್ಯತ್ವ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಗ್ರಾಮೀಣ ಭಾಗದ ಜನರೂ ಸಹ ಬಿಜೆಪಿ ಪರವಾಗಿದ್ದಾರೆಂಬುವುದು ಇದರಿಂದ ವ್ಯಕ್ತವಾಗಿದೆ ಎಂದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿ ರಾಮದಾಸ್ ಮಾತನಾಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರವೂ ಸೇರಿದಂತೆ ಜಿಲ್ಲೆಯಾದ್ಯಂತ ಸದಸ್ಯತ್ವ ಅಭಿಯಾನ ಕಾರ್ಯಕ್ರಮ ಬಿರುಸಿನಿಂದ ಕೂಡಿದೆ. ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾರ್ಗದರ್ಶನದಲ್ಲಿ ಮನೆ, ಮನೆಗೂ ತೆರಳಿ ಪಕ್ಷಕ್ಕೆ ಸದಸ್ಯತ್ವ ಸೇರ್ಪಡೆಗೆ ಮನವಿ ಮಾಡಿಕೊಳ್ಳಲಾಗುತ್ತಿದೆ. ಜನರು ಬಿಜೆಪಿ ಸದಸ್ಯತ್ವ ಅಭಿಯಾನ ಎಂದಕೂಡಲೇ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳುವುದು ಉತ್ತಮ ಬೆಳವಣಿಗೆ ಎಂದರು. ಬಿಜೆಪಿ ಯುವ ಮುಖಂಡ ಟಿ.ಮಂಜುನಾಥ, ಎಲೆ ವೀರಭದ್ರಪ್ಪ, ಟಿ.ತಿಮ್ಮಪ್ಪ, ನವೀನ್, ದಯಾನಂದ, ಯಲಗಟ್ಟೆಗೊಲ್ಲರಹಟ್ಟಿ ಶ್ರೀನಿವಾಸ್ ಪಾಲ್ಗೊಂಡಿದ್ದರು.

---

### ಜನಪದ ಕಲೆ ಆಯಾ ದೇಶದ ಆತ್ಮಚರಿತ್ರೆ: ಸಾಹಿತಿ ಹೆಚ್. ಆನಂದ್ ಕುಮಾರ್

ಚಿತ್ರದುರ್ಗ: ಜನಪದ ಕಲೆಗಳು ಮನುಷ್ಯನಷ್ಟೇ ಪ್ರಾಚೀನವಾದವು. ಜನಪದ ಕಲೆಯನ್ನು ಆಯಾ ದೇಶದ ಆತ್ಮಚರಿತ್ರೆ ಎಂದರೆ ತಪ್ಪಾಗಲಾರದು ಎಂದು ಪ್ರಗತಿಪರ ಚಿಂತಕ, ಸಾಹಿತಿ ಹೆಚ್.ಆನಂದ್ ಕುಮಾರ್ ಹೇಳಿದರು. ನಗರದ ಶ್ರೀ ಸಿದ್ಧೇಶ್ವರ ವಸತಿ ನಿಲಯದ ಸಭಾಂಗಣದಲ್ಲಿ ಶ್ರೀ ಸಿದ್ಧೇಶ್ವರ ಕಲಾ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಸಂಯುಕ್ತಾಶ್ರಯದಲ್ಲಿ ಸೋಮವಾರ ಜನಪದೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ನೆಲಮೂಲ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಜನಪದ ಇಂದಿನ ಯುವ ಪೀಳಿಗೆ ಇಂಥಹ ಜನಪದ ಕಲೆಗಳನ್ನು ಮೈಗೂಡಿಸಿಕೊಂಡು ಉಳಿಸಿ ಬೆಳಸಬೇಕೆಂದು ತಿಳಿಸಿದರು.

---

## ಪ್ರಮುಖ ಸುದ್ದಿ

# ನ್ಯಾಯಾಂಗ ಇಲಾಖೆ ಗೌರವ, ಎತ್ತಿಹಿಡಿಯಲು ವಕೀಲರು ದಕ್ಷತೆ, ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕು: ನ್ಯಾ.ನಂದ್ಯಾಲ

» ಚಳ್ಳಕೆರೆ

ನ್ಯಾಯವನ್ನು ನಂಬಿ ಬರುವ ಕಕ್ಷಿದಾರರಿಗೆ ಸತ್ಯ ಮತ್ತು ಪ್ರಾಮಾಣಿಕತೆಯಿಂದ ನ್ಯಾಯುತವಾಗಿ ದೊರಕಬೇಕಾದ ಪರಿಹಾರವನ್ನು ತೀರ್ಪಿನ ಮೂಲಕ ಕೊಡಿಸುವ ವಕೀಲರ ಜವಾಬ್ದಾರಿ ಮಹತ್ವದಿಂದ ಕೂಡಿದೆ. ಪ್ರತಿಯೊಬ್ಬ ವಕೀಲರು ಕಕ್ಷಿದಾರರಿಗೆ ನ್ಯಾಯ ಒದಗಿಸುವ ಸಂದರ್ಭದಲ್ಲಿ ನ್ಯಾಯಲಯದ ಘನತೆ, ಕೀರ್ತಿಗೆ ದಕ್ಕೆಯಾಗದಂತೆ ಜಾಗ್ರತೆ ವಹಿಸಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶ ಸಮೀರ್ ಪಿ.ನಂದ್ಯಾಲ ತಿಳಿಸಿದರು.

ಅವರು, ಮಂಗಳವಾರ ನ್ಯಾಯಾಲಯದ ಆವರಣದಲ್ಲಿ ತಾಲ್ಲೂಕು ವಕೀಲರ ಸಂಘ ಹಮ್ಮಿಕೊಂಡಿದ್ದ ವಕೀಲರ ದಿನಾಚರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಇಂದು ನ್ಯಾಯಾಲಯದ ಮೇಲೆ ಸಾರ್ವಜನಿಕರ ವಿಶ್ವಾಸ ಹೆಚ್ಚಾಗುತ್ತಿದೆ. ಕಾರಣ, ಎಲ್ಲಾ ನ್ಯಾಯಾಲಯಗಳು ನ್ಯಾಯವನ್ನು ಎತ್ತಿಹಿಡಿಯುವ ಕೆಲಸವನ್ನು ಮಾಡುತ್ತಾ ಬಂದಿವೆ. ವಿಶೇಷವಾಗಿ ವಕೀಲರು ನ್ಯಾಯಾಲಯ ಮತ್ತು ಕಕ್ಷಿದಾರರ ಮಧ್ಯೆ ಸೇತುವೆಯಾಗಿ ಕಾರ್ಯನಿರ್ವಹಿಸಬೇಕು ಎಂದರು.



ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಇತ್ತೀಚಿನ ದಿನಗಳಲ್ಲಿ ನ್ಯಾಯಾಲಯಗಳಿಗೆ ಕೇವಲ ಅಪರಾಧಕ್ಕೆ ಸಂಬಂಧಪಟ್ಟ ವ್ಯಾಜ್ಯಗಳು ಮಾತ್ರ ಬರುತ್ತಿಲ್ಲ. ಬದಲಾಗಿ ಜಮೀನಿಗೆ ಸಂಬಂಧಪಟ್ಟ ದಾಖಲಾತಿಗಳ ಬಗ್ಗೆಯೂ ಸಹ ಸುಧೀರ್ಘವಾದ ಚರ್ಚೆ ನಡೆಯುತ್ತಿದೆ. ಕಂದಾಯ ಇಲಾಖೆ ಎಲ್ಲಾ ದಾಖಲಾತಿಗಳನ್ನು ಅಚ್ಚುಕಟ್ಟಾಗಿ ಸಾರ್ವಜನಿಕರಿಗೆ ನೀಡಿದರೂ ಸಹ ಆ ಬಗ್ಗೆ ನ್ಯಾಯಾಲಯ ಮೊರೆಹೋಗುವ ಸಂಖ್ಯೆ ಹೆಚ್ಚುತ್ತಿದೆ. ವಕೀಲರು ಕಕ್ಷಿದಾರರಿಗೆ ತಮ್ಮದೇಯಾದ ವಾದ, ಪ್ರತಿವಾದ ಮಂಡನೆ ಮೂಲಕ ನ್ಯಾಯದೊರಕಿಸಿಕೊಡುತ್ತಾರೆ ನ್ಯಾಯಾಲಯದ ತೀರ್ಪುಗಳನ್ನು ಎಲ್ಲರೂ ಗೌರವಿಸಬೇಕು ಎಂದರು. ಜೆಎಂಎಫ್‌ಸಿ ನ್ಯಾಯಾಧೀಶೆ ಎಚ್. ಆರ್.ಹೇಮಾ ಮಾತನಾಡಿ, ಸರ್ಕಾರ ನ್ಯಾಯಾಂಗ ಇಲಾಖೆಯಲ್ಲಿ ಹಲವಾರು ಬದಲಾವಣೆಯನ್ನು ರೂಪಿಸಿದೆ. ವಿಶೇಷವಾಗಿ ಬಡ ಜನರು ಆರ್ಥಿಕವಾಗಿ ಹಿಂದುಳಿದ ಕಕ್ಷಿದಾರರಿಗೆ ನ್ಯಾಯಾಲಯದಲ್ಲಿಯೇ ಉಚಿತ ಕಾನೂನು ವ್ಯವಸ್ಥೆಯನ್ನು ಸಹ ಕೈಗೊಂಡಿದೆ. ಕಕ್ಷಿದಾರರು ಕೆಲವೊಂದು ಅನಿವಾರ್ಯ ಸಂದರ್ಭದಲ್ಲಿ ಮಾತ್ರ ನ್ಯಾಯಾಲಯಕ್ಕೆ ತಮ್ಮ ಸಮಸ್ಯೆಗಳನ್ನು ಹೊತ್ತು ಬರಬೇಕಿದೆ. ಸಣ್ಣಪುಟ್ಟ ವಿಷಯಗಳನ್ನು ರಾಜಿಸಂದಾನದ ಮೂಲಕ ಬಗೆಹರಿಸಿಕೊಳ್ಳುವುದು ಉತ್ತಮ ನ್ಯಾಯಾಂಗದ ಮೌಲ್ಯವನ್ನು ಎತ್ತಿಹಿಡಿಲು ವಕೀಲರ ಸಮೂಹ ಜಾಗ್ರತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಪ್ರತಿವರ್ಷದ ವಕೀಲರ ದಿನಾಚರಣೆ ವಕೀಲರ ಸಮೂಹಕ್ಕೆ ಹಬ್ಬದ ಸಂಭ್ರಮವಾಗಿದೆ. ಕಾರಣ, ನಮ್ಮೆಲ್ಲರ ವೃತ್ತಿಬದುಕಿನಲ್ಲಿ ಈ ದಿನಾಚರಣೆ ಅರ್ಥಗರ್ಭಿತವಾಗಿದೆ. ವಕೀಲರ ಸಂಪೂರ್ಣ ಬದುಕು ವೃತ್ತಿಯ ಮೇಲೆ ಅವಲಂಬಿತವಾಗಿದೆ. ವಕೀಲ ವೃತ್ತಿಯನ್ನು ಕೇವಲ ವಕೀಲರು ಮಾತ್ರ ಗೌರವಿಸುತ್ತಿಲ್ಲ, ಬದಲಾಗಿ ಇಡೀ ಸಮಾಜವೇ ಈ ವೃತ್ತಿಯ ಬಗ್ಗೆ ವಿಶ್ವಾಸ ಹೊಂದಿದೆ ಎಂದರು.

ಇದೇ ಸಂದರ್ಭದಲ್ಲಿ ಹಿರಿಯ ವಕೀಲರಾದ ಎಂ.ಎಸ್.ಜಗದೀಶ್‌ನಾಯಕ, ಗಿರೀಶ್, ಆರ್.ಟಿ.ಸ್ವಾಮಿ, ದನಂಜಯ, ಕೆ.ವಿ.ಹನುಮಂತರಾವ್ ಮುಂತಾದವರನ್ನ ಸನ್ಮಾನಿಸಲಾಯಿತು. ತಹಶೀಲ್ದಾರ್ ರೇಹಾನ್‌ಪಾಷ, ಸಂಘದ ಉಪಾಧ್ಯಕ್ಷ ಪಾಲಯ್ಯ, ಕಾರ್ಯದರ್ಶಿ ಎಂ.ಸಿದ್ದರಾಜು, ಡಿ.ಬಿ.ಬೋರಯ್ಯ, ಟಿ.ರುದ್ರಯ್ಯ, ದೊರೆನಾಗರಾಜು, ಸಣ್ಣಬೋರನಾಯಕ, ಬಿ.ಟಿ.ಶ್ಯಾಮಲ, ಒ.ಹನುಮಂತರಾಯ, ರಾಮಕೃಷ್ಣ, ಹಿರಿಯ ವಕೀಲರಾದ ಜಿ.ಶರಣಪಯ್ಯ, ಟಿ.ತಮ್ಮಣ್ಣ, ಕೆ.ವಿ.ಪ್ರಭಾಕರ ಮುಂತಾದವರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮನೆ ಮನೆಗೆ ಭದ್ರಾ ನೀರು ತಲುಪಲಿದೆ



» **ಹೊಸದುರ್ಗ**

ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಕಾಮಗಾರಿ ಭರದಿಂದ ಸಾಗುತ್ತಿದೆ ಮನೆ ಮನೆಗೆ ಭದ್ರಾ ನೀರು ತಲುಪಲಿದೆ ಎಂದು ಶಾಸಕ ಬಿ. ಜಿ. ಗೋವಿಂದಪ್ಪ ತಿಳಿಸಿದರು. ಅವರು ತಾಲೂಕಿನ ಬೋಕಿಕೆರೆ ಗ್ರಾ.ಪಂ. ಚನ್ನಸಮುದ್ರ (ಪುರ) ಗ್ರಾಮದ ಜಲ ಜೀವನ್ ಮಿಷನ್ ಯೋಜನೆಯಡಿ ಮನೆ ಮನೆಗೆ ನೀರು ಕೊಡುವ ಯೋಜನೆಯ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಬಹು ಗ್ರಾಮ ಕುಡಿಯುವ ನೀರು ಸರಬರಾಜು ಮಾಡುವ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಕಾಮಗಾರಿ ಕೈಗೊಂಡಿದೆ ಎಂದರು.ಇದೇ ಸಂಧರ್ಬದಲ್ಲಿ ಬೋಕಿಕೆರೆ ಗ್ರಾ.ಪಂ ಮಾಚೇನಹಳ್ಳಿ ಗ್ರಾಮದ ಸ.ಹಿ.ಪ್ರಾ ಶಾಲೆ ನೂತನ ಕೊಠಡಿ ನಿರ್ಮಾಣ,ಎಂ.ಜಿ ದಿಬ್ಬ ಗ್ರಾಮದ ಜಲ ಜೀವನ್ ಮಿಷನ್ ಯೋಜನೆಯಡಿ ಮನೆ ಮನೆಗೆ ನೀರು ಕೊಡುವ ಯೋಜನೆಯ ಕಾಮಗಾರಿಗೆ ಶಾಸಕರು ಭೂಮಿ ಪೂಜೆ ನೆರವೇರಿಸಿದರು.ಈ ಸಂಧರ್ಬದಲ್ಲಿ ಮುಖಂಡರಾದ ಕೆ. ಟಿ. ರಂಗನಾಥ್, ರಂಗಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸೀನ್, ಗ್ರಾಮ ಪಂಚಾಯತ್ ಪಿಡಿಒ ಜಯಪ್ಪ, ಇಸಿಓ ಶಶಿಧರ್, ಶಿಕ್ಷಕರ ಸಂಘದ ಅಧ್ಯಕ್ಷ ಮಂಜುನಾಥ್, ಗ್ರಾಮ ಪಂಚಾಯತಿ ಅಧ್ಯಕ್ಷರು ಸದಸ್ಯರು ಹಾಗೂ ಗ್ರಾಮಸ್ಥರು ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು

### ಶಾಸಕ ಚಂದ್ರಪ್ಪ ಉಚ್ಚಾಟನೆಗೆ ಆಗ್ರಹ



» **ಹೊಳಲ್ಕೆರೆ**

ಕ್ಷೇತ್ರದಲ್ಲಿರುವ ಬಿಜೆಪಿ ಪಕ್ಷದ ಕಾರ್ಯಕರ್ತರನ್ನು ಕಡೆಗಣಿಸಿದ ಶಾಸಕ ಎಂ.ಚಂದ್ರಪ್ಪ, ಈಗಾ ಬಿಜೆಪಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧದ ಪಿತುರಿ ಗುಂಪಿನಲ್ಲಿದ್ದಾರೆ ಹಾಗಾಗಿ ಶಾಸಕ ಎಂ.ಚಂದ್ರಪ್ಪ ಇವರನ್ನು ಹೈಕಮಾಂಡ್ ಪಕ್ಷದಿಂದ ಉಚ್ಚಾಟಿಸಬೇಕೆಂದು ಪಟ್ಟಣ ಪಂಚಾಯ್ತಿ ಮಾಜಿ ಉಪಾಧ್ಯಕ್ಷ ಜಯಸಿಂಹ ಖಾಟ್ರೊತ್ ಪಕ್ಷಕ್ಕೆ ಮನವಿ ಮಾಡಿದರು. ಅವರು ಪಟ್ಟಣದ ಸ್ನೇಹ ಕಂಪರ್ಟನಲ್ಲಿ ಮಂಗಳವಾರ ಬಿಜೆಪಿ ಪಕ್ಷದ ಕಾರ್ಯಕರ್ತರು ಹಮ್ಮಿಕೊಂಡಿದ್ದ ಸಂಘಟನಾ ಸಭೆಯಲ್ಲಿ ಮಾತನಾಡಿದರು. ರಾಜ್ಯದಲ್ಲಿ ಬಿಜೆಪಿ ಪಕ್ಷದವನ್ನು ಕಟ್ಟಿದ್ದು ಬಿ.ಎಸ್.ಯಡಿಯೂರಪ್ಪ, ಅವರ ಕೃಪಾರ್ಶಿವಾದ ಪಡೆದು ರಾಜಕೀಯ ಸ್ಥಾನ ಮಾನ ಪಡೆದುಕೊಂಡಿದ್ದ ಶಾಸಕ ಎಂ.ಚಂದ್ರಪ್ಪ ಅವರ ವಿರುದ್ದದ ಪಿತೂರಿ ಚಟುವಟಿಕೆಯಲ್ಲಿ ಪಾಲ್ಗೊಂಡಿದ್ದಾರೆ. ಹೊಳಲ್ಕೆರೆ ವಿಧಾನ ಸಭಾ ಕ್ಷೇತ್ರದಲ್ಲಿ ಶಾಸಕ ಎಂ.ಚಂದ್ರಪ್ಪಗೆ ಯಾವುದೇ ವರ್ಚಸಿಲ್ಲ. ಕ್ಷೇತ್ರದಲ್ಲಿ ದೊಡ್ಡ ಸಂಖ್ಯೆ ಲಿಂಗಾಯ್ತಿರು ಬಿಜೆಪಿ ಸಿದ್ದಾಂತದ ಜತೆ ಪ್ರಧಾನಿ ಮೋದಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇವರ ನಾಯಕತ್ವಕ್ಕೆ ಬೆಂಬಲಿಸಿ ಶಾಸಕ ಎಂ.ಚಂದ್ರಪ್ಪ ಇವರಿಗೆ ಮತನೀಡಿದ್ದಾರೆ. ಅದನ್ನೇ ಬಂಡವಾಳ ಮಾಡಿಕೊಂಡಿರುವ ಶಾಸಕ ಎಂ.ಚಂದ್ರಪ್ಪ ನನ್ನಂತ ಲೀಡರ್ ಯಾರು ಇಲ್ಲ ಎಂದು ಕೊಂಡಿದ್ದು, ಬಿಜೆಪಿ ಪಕ್ಷದ ಕಾರ್ಯಕರ್ತರನ್ನು ನಿರ್ಲಕ್ಷ್ಯಿಸಿದ್ದಾರೆ. ಹಿರಿಯ ಕಾರ್ಯಕರ್ತನ್ನು ಮೂಲೆಗುಂಪು ಮಾಡಲು ಹವಣಿಸುತ್ತಿದ್ದಾರೆ. ಪಕ್ಷದ ವಿರೋಧಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ಮಾಜಿ ಅಧ್ಯಕ್ಷ ರಾಜಶೇಖರ್ ಮಾತನಾಡಿ, ಶಾಸಕರ ಚುನಾವಣೆಗೆ ಮಾತ್ರ ಎಲ್ಲರೂ ಬೆಂಬಲಿಸಬೇಕು. ಅವರು ಮಾತ್ರ ಇನ್ನೊಬ್ಬರ ಪರವಾಗಿ ಕೆಲಸ ಮಾಡುವುದಿಲ್ಲ. ಬೇರೆಯವನ್ನು ಸೂಲಿಸಿ ಜಿಲ್ಲೆಯಲ್ಲಿ ಚಕ್ರಾಧಿಪತಿಯಾಗಬೇಕೆಂದು ಬಯಕೆ ಅವರದ್ದು, ಪ್ರತಿ ಸಂಸತ್ ಚುನಾವಣೆಯಲ್ಲಿಯೂ ಪಕ್ಷ ವಿರೋಧಿ ಚಟುವಟಿಕೆ ಮಾಡಿಕೊಂಡು ಬಂದಿದ್ದಾರೆ. ಮಾಜಿ ಎಂ.ಪಿ.ಜನಾರ್ಥನಸ್ವಾಮಿ, ನಾರಾಯಾಣಸ್ವಾಮಿ, ಈಗೀನ ಗೋವಿಂದ ಕಾರಜೋಳ ವಿರುದ್ಧ ಚುನಾವಣೆ ಮಾಡಿದರು. ಜನರು ಮಾತ್ರ ಪಕ್ಷಕ್ಕೆ ಮನ್ನಣೆ ನೀಡಿ ಮತ ನೀಡಿ ಗೆಲ್ಲಿಸಿದ್ದಾರೆ. ಸೋಲಿಸಲು ಪ್ರಯತ್ನಿಸುವ ಶಾಸಕ ಎಂ.ಚಂದ್ರಪ್ಪ, ಅವರು ಗೆದ್ದ ಬಳಿಕ ನಾನೆ ಗೆಲ್ಲಿಸಿದೆ ಎಂದು ಬಿಂಬಿಸಿಕೊಳ್ಳುತ್ತಾರೆ. ಮಗನಿಗೆ ಟೀಕೆಟ್ ಮಿಸ್ ಆಗಿದ್ದರಿಂದ ಗೋವಿಂದ ಕಾರಜೋಳರನ್ನು ಸೊಲಿಸುವ ಪಣ ತೊಟ್ಟಿದ್ದರು. ಅದರೇ ಕ್ಷೇತ್ರ ಪ್ರಬುದ್ಧ ಮತದಾರರು ಗೋವಿಂದ ಕಾರಜೋಳರನ್ನು ಅಯ್ಕೆ ಮಾಡಿದರು. ಅವರನ್ನು ಬೆಂಬಲಿಸಿದ ಕಾರ್ಯಕರ್ತರನ್ನು ಗುರಿಮಾಡಿಕೊಂಡು ಸೇಡು ತೀರಿಸಿಕೊಳ್ಳಲು ಶಾಸಕ ಎಂ.ಚಂದ್ರಪ್ಪ ಮುಂದಾಗಿರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಂಸದ ಗೋವಿಂದ ಕಾರಜೋಳ ಹೊಳಲ್ಕೆರೆ ಪುರಸಭೆ ಚುನಾವಣೆಯಲ್ಲಿ ಪಾಲ್ಗೊಂಡು ಬಿಜೆಪಿ ಪಕ್ಷದ ಮಹಿಳಾ ಸದಸ್ಯರನ್ನು ಪುರಸಭೆಯ ಉಪಾಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಿಸಿದ್ದಾರೆ.

# ವಿಕಲಚೇತನರ ಸಬಲೀಕರಣಕ್ಕೆ ಬದ್ಧ

## ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಪೂರಕ ಅಂದಾಜಿನಲ್ಲಿ 44 ಕೋಟಿಗಳನ್ನು ಮಂಜೂರು: ಸಿಎಂ ಭರವಸೆ

» **ಬೆಂಗಳೂರು**

ವಿಕಲಚೇತನರ ಸಬಲೀಕರಣಕ್ಕಾಗಿ ಸರ್ಕಾರ ಬದ್ಧವಾಗಿದ್ದು, ಅವರ ಶ್ರೇಯೋಭಿವೃದ್ಧಿಗಾಗಿ ಪ್ರಸಕ್ತ ಸಾಲಿನ ಪೂರಕ ಅಂದಾಜಿನಲ್ಲಿ 44 ಕೋಟಿಗಳನ್ನು ಮಂಜೂರು ಮಾಡುವ ಭರವಸೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿದರು.ಅವರು ಇಂದು ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ವತಿಯಿಂದ ಶ್ರೀ ಕಂಠೀರವ ಒಳಾಂಗಣ ಕ್ರೀಡಾಂಗಣ ದಲ್ಲಿ ಆಯೋಜಿಸಲಾಗಿದ್ದ ವಿಶ್ವ ವಿಕಲಚೇತನರ ದಿನಾಚರಣೆಯ ಕಾರ್ಯಕ್ರಮ ದಲ್ಲಿ ಭಾಗವಹಿಸಿ ನಂತರ ಕಾರ್ಯಕ್ರಮ ವನ್ನು ಉದ್ದೇಶಿಸಿ ಮಾತನಾಡಿದರು.



**ಸಂವಿಧಾನದಲ್ಲಿ ಎಲ್ಲರಿಗೂ ಬದುಕುವ ಅವಕಾಶವಿದೆ:** ರಾಜ್ಯದಲ್ಲಿ ಸುಮಾರು 15 ಲಕ್ಷ ವಿಕಲಚೇತನರಿದ್ದಾರೆ. ಇವರೆಲ್ಲರ ಆರೈಕೆ ಮಾಡಿ ವಿಶೇಷ ಸೌಲಭ್ಯಗಳನ್ನು ನೀಡುವುದು ಸರ್ಕಾರದ ಕರ್ತವ್ಯ. ಸಂವಿಧಾನದಲ್ಲಿ ಎಲ್ಲರೂ ಬದುಕುವ , ಉದ್ಯೋಗ ಪಡೆಯುವಂತಹ ಅವಕಾಶವನ್ನು ಕಲ್ಪಿಸಿದೆ. ವಿಕಲಚೇತನರು ಸಮಾಜಕ್ಕೆ ಹೊರೆಯಲ್ಲ. ಅವರು ಸಮಾಜದ ಆಸ್ತಿಯಾಗಿದ್ದು, ಎಲ್ಲ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡುತ್ತಿದ್ದಾರೆ. ಇತ್ತೀಚೆಗೆ ನಡೆದ ಪಾರಾ ಒಲಂಪಿಕ್ಸ್ ನಲ್ಲಿ ಭಾರತದ ವಿಕಲಚೇತನ ಕ್ರೀಡಾಪಟುಗಳು ಹೆಚ್ಚಿನ ಪದಕಗಳನ್ನು ಪಡೆದಿರುವುದು ಹೆಮ್ಮೆಯ ವಿಚಾರ. ನಮ್ಮ ಸರ್ಕಾರ ಈ ಬಾರಿ ವಿಶ್ವ ವಿಕಲಚೇತನರ ದಿನಾಚರಣೆಯನ್ನು "ಸಮಗ್ರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ವಿಕಲಚೇತನ ವ್ಯಕ್ತಿಗಳಲ್ಲಿ ನಾಯಕತ್ವದ ಉತ್ತೇಜನ"ಎಂಬ ಘೋಷವಾಕ್ಯದೊಂದಿಗೆ ಆಚರಿಸುತ್ತಿದ್ದೇವೆ ಎಂದರು.

**ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿ:** ಈ ವರ್ಷ ನಾಲ್ಕು ಬಗೆಯ ವಿಕಲಚೇತನರ ಆರೈಕೆದಾರರಿಗೆ ಪ್ರತಿ ಮಾಹೆ 1000 ರೂ. ಗಳ ಆರೈಕೆದಾರರ ಭತ್ಯೆ ನೀಡುವ ಯೋಜನೆಯನ್ನು ದೇಶದಲ್ಲಿ ಪ್ರಪ್ರಥಮವಾಗಿ ಕರ್ನಾಟಕ ರಾಜ್ಯ ಘೋಷಿಸಿ ಪ್ರಸಕ್ತ ಸಾಲಿನಿಂದ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ 7 ಜಿಲ್ಲೆಗಳಲ್ಲಿ ರೂ. 2 ಕೋಟಿ ವೆಚ್ಚದಲ್ಲಿ 10 ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆಗಳನ್ನು ಪ್ರಾರಂಭಿಸಲು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಣೆಯಂತೆ ಶಾಲೆಗಳನ್ನು ತೆರೆಯಲಾಗಿದೆ. ಇದಲ್ಲದೇ ಇನ್ನೂ 13 ಹೊಸ ಶಾಲೆಗಳನ್ನು ಪ್ರಸಕ್ತ ಸಾಲಿನಲ್ಲಿ ಅನುದಾನಕ್ಕೆ ಒಳಪಡಿಸಲಾಗಿದೆ. ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರ ಅವಲಂಬಿತರಿಗೆ ನೀಡಲಾಗುವ ಮರಣ ಪರಿಹಾರ ನಿಧಿಯನ್ನು 2023ನೇ ಸಾಲಿನಲ್ಲಿ ರೂ. 50,000/- ದಿಂದ ಪರಿಷ್ಕರಿಸಿ ರೂ.1.00 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಸರ್ಕಾರಿ ಉದ್ಯೋಗಗಳಲ್ಲಿ 'ಸಿ' ಮತ್ತು 'ಡಿ' ಸಮೂಹದ ಹುದ್ದೆಗಳಲ್ಲಿ ಶೇ.5 ಹಾಗೂ 'ಎ' ಮತ್ತು 'ಬಿ' ಹುದ್ದೆಗಳಲ್ಲಿ ಶೇ.4ರಷ್ಟು ಮೀಸಲಾತಿಯನ್ನು ನೀಡಲಾಗಿದೆ. ಅಲ್ಲದೇ ಇವರು ನಿರ್ವಹಿಸಬಹುದಾದಂತಹ ಹುದ್ದೆಗಳನ್ನು ಗುರುತಿಸಲು ರಾಜ್ಯ ಮಟ್ಟದಲ್ಲಿ ತಜ್ಞರ ಸಮಿತಿಯನ್ನು ರಚಿಸಲಾಗಿದ್ದು ಇಲಾಖೆಗಳಲ್ಲಿನ ಹುದ್ದೆಗಳನ್ನು ಗುರುತಿಸುವ ಕಾರ್ಯ ನಡೆಯುತ್ತಿದೆ. ವಿಕಲಚೇತನರ ಅನುಕೂಲಕ್ಕಾಗಿ ವಾಹನಗಳನ್ನು ನೀಡಲು ಈಗಾಗಲೇ ಸೂಚನೆ ನೀಡಲಾಗಿದೆ ಎಂದರು.

**ವಿಕಲಚೇತನರ ಮಾಸಾಶನ ಹೆಚ್ಚಿಸಲು ಕೇಂದ್ರಕ್ಕೆ ಮನವಿ:** ಸಾಮಾಜಿಕ ಸಬಲೀಕರಣಕ್ಕಾಗಿ ಸಹ ಶೇಕಡಾ 40 ರಿಂದ 74 ವಿಕಲಚೇತನರಿಗೆ ರೂ. 800/- ಹಾಗೂ 75% ಮತ್ತು ಅದಕ್ಕಿಂತ ಹೆಚ್ಚಿನ ಅಂಗವೈಕಲ್ಯತೆವುಳ್ಳವರಿಗೆ ರೂ. 1400/- ಮತ್ತು ತೀವ್ರತರನಾದ ಮನೋವೈಕಲ್ಯತೆ ಇರುವ ವ್ಯಕ್ತಿಗಳಿಗೆ ರೂ. 2000/- ಪ್ರತಿ ತಿಂಗಳು ಮಾಸಾಶನ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದಿಂದ ನೀಡಲಾಗುವ ವಿಕಲಚೇತನರ ಮಾಸಾಶನ ಮೊತ್ತವನ್ನು ಹೆಚ್ಚಿಸುವಂತೆ ಕೋರಿ ಸರ್ಕಾರ ಬರೆಯಲು ಕ್ರಮ ಕೈಗೊಳ್ಳಲಿದೆ. ವಿಕಲಚೇತನರ ಸಬಲೀಕರಣಕ್ಕಾಗಿ ಸರ್ಕಾರ ಬದ್ಧವಾಗಿದೆ ಎಂದರು.

# ಪಾತಲಿಂಗೇಶ್ವರ ದೇವಸ್ಥಾನ ಜೀರ್ಣೋದ್ಧಾರ



» **ಚಳ್ಳಕೆರೆ**

ತಾಲ್ಲೂಕಿನ ಐತಿಹಾಸಿಕ ದೇವಾಲಯಗಳಲ್ಲಿ ಒಂದಾದ ಚನ್ನಮ್ಮನಾಗತಿಹಳ್ಳಿ ಗ್ರಾಮದ ಶ್ರೀಪಾತಲಿಂಗೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಕ್ಕೆ ಮಂಡಳಿ ಮುಂದಾಗಿದೆ ಎಂದು ದೇವಸ್ಥಾನ ಸಮಿತಿ ಅಧ್ಯಕ್ಷ ಆರ್.ಮಲ್ಲಯ್ಯ ತಿಳಿಸಿದರು.

ನಗರದ ಪ್ರವಾಸಿಮಂದಿರದಲ್ಲಿ ಭಾನುವಾರ ದೇವಸ್ಥಾನ ಕಮಿಟಿಯಿಂದ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿ, ಕಳೆದ ನೂರಾರು ವರ್ಷಗಳಿಂದ ಪುರಾತನ ಐತಿಹ್ಯ ಹೊಂದಿರುವ ದೇವಾಲಯಕ್ಕೆ ಮರುನಿರ್ಮಾಣದ ಅಗತ್ಯತೆ ಇದೆ. ಈ ಬಗ್ಗೆ ಹಲವಾರು ಬಾರಿ ಸಂಬಂಧಪಟ್ಟ ಅಧಿಕಾರಿಗಳನ್ನು ಸಂಪರ್ಕಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಈ ಬಾರಿ ಅತಿ ಹೆಚ್ಚಿನ ಮಳೆಯಿಂದ ದೇವಸ್ಥಾನ ಅಪಾಯದ ಹಂಚಿಗೆ ತಲುಪಿದೆ.

ಮುಂದಿನ ದಿನಗಳಲ್ಲಿ ಇದೇ ರೀತಿ ಮಳೆ ಮುಂದುವರೆದರೆ ಐತಿಹಾಸಿಕ ದೇವಾಲಯ ಇಲ್ಲವಾಗುತ್ತದೆ. ಪುರಾತನ ಕಾಲದಿಂದಲ್ಲೂ ಪೂಜಿಸುತ್ತಾ ಬಂದಿರುವ ಶ್ರೀಪಾತಲಿಂಗೇಶ್ವರ ದೇವಸ್ಥಾನ ಮುಂದಿನ ಪೀಳಿಗೆಗೆ ಉಳಿಯಬೇಕಾದರೆ ದೇವಾಲಯಕ್ಕೆ ಮರುಪೂರ್ಣ ನಿರ್ಮಾಣ ಅಗತ್ಯವಿದೆ. ಆದ ಕಾರಣ ಈ ದೇವಸ್ಥಾನವನ್ನು ಉಳಿಸುವ ಕೆಲಸ ಮಾಡಬೇಕಿದೆ ಎಂದರು.

ಕಾರ್ಯದರ್ಶಿ ಕರೀಕೆರೆ ನಾಗರಾಜು ಮಾತನಾಡಿ, ,15 ಶತಮಾನದಲ್ಲಿ ನಿರ್ಮಾಣವಾದ ದೇವಾಲಯ ಎನ್ನುವ ಶ್ರೀಪಾತಲಿಂಗೇಶ್ವರ ದೇವಸ್ಥಾನ ಚೋಳರ ಶೈಲಿಯನ್ನು ಹೋಲುತ್ತದೆ. ಸಾವಿರಾರು ವರ್ಷಗಳಿಂದ ಮಡಿವಾಳ ಸಮುದಾಯ ಈ ದೇವಸ್ಥಾನವನ್ನು ನಿರ್ವಹಣೆ ಮಾಡುತ್ತಾ ಬಂದಿದೆ. ಆದರೆ, ಕಳೆದ ತಿಂಗಳ ಬಂದ ಗಾಳಿ, ಮಳೆಗೆ ದೇವಾಲಯ ಅಳಿವಿನಹಂಚಿಗೆ ಬಂದಿದೆ. ಈ ಬಗ್ಗೆ ಗೊರವಿನಕೆರೆ ವಂಶಸ್ಥರು ಇಲ್ಲಿಯವರೆಗೂ ಉಳಿಸಿಕೊಂಡು ಬಂದಿದ್ದಾರೆ. ಈ ಕುರಿತು ಗರ್ಭಗುಡಿ ಜೀರ್ಣೋದ್ಧಾರಕ್ಕಾಗಿ ದೇವಸ್ಥಾನಕ್ಕೆ ಸೇರುವ ಅಣ್ಣತಮ್ಮಂದಿರು ಮುಂದೆ ಬರಬೇಕಿದೆ. ಪುರಾತನ ದೇವಾಲಯವಾದ್ದರಿಂದ ನಮ್ಮೊಟ್ಟಿಗೆ ಜನಪ್ರತಿನಿಧಿಗಳು, ಸಂಘಸಂಸ್ಥೆಯ ಪ್ರತಿನಿಧಿಗಳು, ದಾನಿಗಳು ಕೈಜೋಡಿಸಿ ಎಂದು ಮನವಿ ಮಾಡಿದರು.

ಆರ್.ಚಂದ್ರಣ್ಣ, ಪ್ರಕಾಶ್, ಕೆಂಚಣ್ಣ, ನಿಂಗಣ್ಣ, ತಿಪ್ಪೇಸ್ವಾಮಿ, ರಮೇಶ್, ನಾಗರಾಜು ಮುಂತಾದವರು ಇದ್ದರು.



ಹಳವುದರ ಗ್ರಾಮದಲ್ಲಿ ನೂತನ ಉಪ ಆರೋಗ್ಯ ಕೇಂದ್ರ ನಿರ್ಮಾಣ ಕಾಮಗಾರಿಗೆ ಶಾಸಕ ಡಾ.ಎಂ. ಚಂದ್ರಪ್ಪನವರಿಂದ ಭೂಮಿಪೂಜೆ.

## ಜಾನಪದ ಕಲೆಯನ್ನು ಯುವ ಪೀಳಿಗೆಗೆ ಪರಿಚಯಿಸಿ; ಶ್ರೀನಿವಾಸ್




» **ಚಿತ್ರದುರ್ಗ**

ಗ್ರಾಮೀಣ ಭಾಗದಿಂದ ಹುಟ್ಟಿಕೊಂಡಿರುವ ಜಾನಪದ ಕಲೆಯನ್ನು ಉಳಿಸಿ ಮುಂದಿನ ಪೀಳಿಗೆಗೆ ಪರಿಚಯಿಸಬೇಕಿದೆ ಎಂದು ನಗರಸಭೆ ಸದಸ್ಯ ಹೆಚ್.ಶ್ರೀನಿವಾಸ್ ತಿಳಿಸಿದರು.

ಬುದ್ದ ಕ್ರೀಡಾ ಮತ್ತು ಗ್ರಾಮೀಣಾಭಿವೃದ್ದಿ ಸಾಂಸ್ಕೃತಿಕ ಕಲಾ ಸಂಘ ಹಲ್ಲೇಹಾಳ್, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಇವರುಗಳ ಸಹಯೋಗದೊಂದಿಗೆ ಜೋಗಿಮಟ್ಟಿ ರಸ್ತೆಯಲ್ಲಿರುವ ವಾಸುದೇವರೆಡ್ಡಿ ಪ್ರೌಢಶಾಲೆಯಲ್ಲಿ ಏರ್ಪಡಿಸಲಾಗಿದ್ದ ಜಾನಪದ ಸಿರಿ ಸಂಭ್ರಮವನ್ನು ತಬಲ ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಜಾನಪದ, ಸೋಬಾನೆ, ಗೀಗಿಪದ, ತತ್ವಪದಗಳನ್ನು ಹಾಡುವವರೆ ಕಡಿಮೆಯಾಗಿದ್ದಾರೆ. ಹಿಂದಿನ ಕಾಲದಲ್ಲಿ ಸುಗ್ಗಿ ಸಂದರ್ಭದಲ್ಲಿ ಜಾನಪದ ಹಾಡುಗಳು ಮೊಳಗುತ್ತಿದ್ದವು. ಗಾದೆ ಮಾತು, ಒಗಟು, ಬಾಯಿಂದ ಬಾಯಿಗೆ ಹರಡುವ ಜಾನಪದನ್ನು ಪೋಷಿಸಿದರೆ ಮಾತ್ರ ಕಲಾವಿದರು ಉಳಿಯಲು ಸಾಧ್ಯ ಎಂದು ಹೇಳಿದರು.ಬುದ್ದ ಕ್ರೀಡಾ ಮತ್ತು ಗ್ರಾಮೀಣಾಭಿವೃದ್ದಿ ಸಾಂಸ್ಕೃತಿಕ ಕಲಾ ಸಂಘದ ಕಾರ್ಯದರ್ಶಿ ಡಿ.ನಾಗರಾಜ್ ಮಾತನಾಡಿ ಜಾನಪದ ಗೀತೆ, ಸೋಬಾನೆ, ತತ್ವಪದಗಳನ್ನು ಹಾಡುವವರೆ ಇಲ್ಲದಂತಾಗಿದ್ದಾರೆ. ಅದಕ್ಕಾಗಿ ಜಾನಪದವನ್ನು ಉಳಿಸಿ ಮುಂದಿನ ಪೀಳಿಗೆಗೆ ಸಂರಕ್ಷಿಸಬೇಕಿದೆ ಎಂದರು. ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಕಾರ್ಯದರ್ಶಿ ಡಾ.ಪ್ರಶಾಂತ್ ಮಾತನಾಡಿ, ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆ ಜಾನಪದ ಕಲೆಯನ್ನು ಪರಿಚಯಿಸಬೇಕಿದೆ. ಜಾನಪದ ಎನ್ನುವುದು ಕೇವಲ ಹಾಡಲ್ಲ. ಅದೊಂದು ಸಮಾಜಕ್ಕೆ ಉತ್ತಮ ಸಂದೇಶ ಸಾರುವ ಸಾಧನ ಎಂದು ಹೇಳಿದರು.ಮುಖ್ಯ ಶಿಕ್ಷಕಿ ಪದ್ಮ, ಬಡಾವಣೆ ಠಾಣೆ ಸಬ್‌ಇನ್ಸ್‌ಪೆಕ್ಟರ್ ಯಶೋಧ, ನ್ಯಾಯವಾದಿ ಎಸ್.ವಿಜಯಕುಮಾರ್, ಬುದ್ದ ಕ್ರೀಡಾ ಮತ್ತು ಗ್ರಾಮೀಣಾಭಿವೃದ್ದಿ ಸಾಂಸ್ಕೃತಿಕ ಕಲಾ ಸಂಘದ ಅಧ್ಯಕ್ಷೆ ರೇಖಮ್ಮ, ಕೃಷ್ಣಪ್ಪ ಎ.ಹುಲ್ಲೂರು, ಶಿಕ್ಷಕರುಗಳಾದ ರಾಮಲಿಂಗಪ್ಪ, ನಾಗರಾಜ್, ರವಿಕುಮಾರ್, ಮಹಮದ್ ಫಜಲುಲ್ಲಾ, ಗಿರಿಜಮ್ಮ, ಶಿವಮೂರ್ತಿ ಇವರುಗಳು ವೇದಿಕೆಯಲ್ಲಿದ್ದರು.

## ಪ್ರಮುಖ ಸುದ್ದಿ

### ವಿಶ್ವ ಏಡ್ಸ್ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಕಿವಿಮಾತು

# ಹೆಚ್‌ಐವಿ ಕುರಿತು ಯುವ ಜನತೆ ಜಾಗರೂಕರಾಗಿರಿ

» **ಚಿತ್ರದುರ್ಗ**

ದೇಶದಲ್ಲಿ ಹೆಚ್.ಐ.ವಿ. ಸೊಂಕಿಗೆ ತುತ್ತಾಗುತ್ತಿರುವವರ ಪೈಕಿ ಹೆಚ್ಚಿನವರು ಯುವಕರಾಗಿರುವುದು ಆತಂತಕಾರಿ ವಿಷಯವಾಗಿದೆ. ಯುವ ಜನತೆ ಹೆಚ್.ಐ.ವಿ ಕುರಿತು ಜಾಗರೂಕರಾಗಿರಬೇಕು ಎಂದು ಜಿಲ್ಲಾ ಶಸ್ತ್ರ ಚಿಕಿತ್ಸಕ ಎಸ್.ಪಿ. ರವೀಂದ್ರ ಕಿವಿ ಮಾತು ಹೇಳಿದರು.



ನಗರದ ಮಹಾರಾಜ ಮದಕರಿ ನಾಯಕ ಪ್ರಥಮ ದರ್ಜೆ ಕಾಲೇಜಿನ ಶ್ರೀ ಗುರು ವಾಲ್ಮೀಕಿ ಮಹರ್ಷಿ ಸಭಾಂಗಣದಲ್ಲಿ, ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕ, ರಾಷ್ಟ್ರೀಯ ಆರೋಗ್ಯ ಅಭಿಯಾನ, ಮಹಾರಾಜ ಮದಕರಿ ನಾಯಕ ಪ್ರಥಮ ದರ್ಜೆ ಕಾಲೇಜು ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ "ವಿಶ್ವ ಏಡ್ಸ್ ದಿನ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತಾಡಿದರು.

1988 ರಿಂದ ಪ್ರತಿ ವರ್ಷ ಡಿ.1ರಂದು ವಿಶ್ವ ಏಡ್ಸ್ ದಿನ ಆಚರಿಸಲಾಗುತ್ತದೆ. ಸರ್ಕಾರದಿಂದ ಈ ಸೋಂಕನ್ನು ಸಂಪೂರ್ಣವಾಗಿ ತಡೆಗಟ್ಟಲು ಹಲವಾರು ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಹೆಚ್‌ಐವಿ ಸೋಂಕು 4 ಹಂತಗಳಲ್ಲಿ ಹರಡುತ್ತದೆ. ಅಸುರಕ್ಷಿತ ಲೈಂಗಿಕ ಕ್ರಿಯೆ, ತಾಯಿಯಿಂದ ಮಗುವಿಗೆ, ಸೋಂಕಿತರ ರಕ್ತದಿಂದ ಹಾಗೂ ಐ.ಡಿ.ಯೂಗಳಲ್ಲಿ ಸೋಂಕು ಹರಡುವ ಸಾಧ್ಯತೆ ಹೆಚ್ಚಿದೆ. ಯುವಕರು ಮಾದಕ ವ್ಯಸನ ತುತ್ತಾಗುವುದರ ಜೊತೆಗೆ, ಹೆಚ್.ಐ.ವಿ ಸೊಂಕಿಗೆ ಬಲಿಯಾಗುತ್ತಿದ್ದಾರೆ. ಸೋಂಕಿಗೆ ಒಳಗಾದವರು ಯಾವುದೇ ಮುಜುಗರಕ್ಕೆ ಒಳಗಾಗದೆ ಭಯ ಭೀತಿ ಇಲ್ಲದೇ ಪರೀಕ್ಷಿಸಿಕೊಂಡು ಹೆಚ್.ಐ.ವಿ ಮುಕ್ತ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಡಾ.ಎಸ್.ಪಿ.ರವೀಂದ್ರ ಹೇಳಿದರು. ಜಿಲ್ಲಾ ಆರ್.ಸಿ.ಹೆಚ್. ಡಾ.ಅಭಿನವ್ ಪ್ರಾಸ್ತಾವಿಕವಾಗಿ ಮಾತನಾಡಿ, ಯುವಕರು ಈ ದೇಶದ ಬೆನ್ನೆಲುಬು. ಬದುಕಿನ ಹಾಗೂ ದೇಶದ ಭವಿಷ್ಯ ಯುವಜನತೆ ಕೈಯ್ಯಲ್ಲಿದೆ. ಆದರೆ ದೇಶದಲ್ಲಿ ಹೆಚ್.ಐ.ವಿ ಯೊಂದಿಗೆ ಬದುಕುತ್ತಿರುವ ಶೇ.40ರಷ್ಟು ಜನ 15-29 ವಯಸ್ಸಿನ ಯುವಕರು ಹಾಗೂ 15-49ರ ವಯಸ್ಸಿನ ಶೇ.83 ರಷ್ಟು ಸೋಂಕಿತರು ಮತ್ತು ಶೇ.39ರಷ್ಟು ಮಹಳೆಯರಾಗಿದ್ದು, ಜಿಲ್ಲೆಯು ಶೇ0.33ರಷ್ಟು ಹೆಚ್.ಐ.ವಿ ಸೋಂಕಿನೊಂದಿಗೆ ರಾಜ್ಯದಲ್ಲಿ 22ನೇ ಸ್ಥಾನದಲ್ಲಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಎಲ್ಲೆಡೆಯೂ ಆರೋಗ್ಯ ಎಲ್ಲರಿಗೂ ಆರೋಗ್ಯ ಎನ್ನುವ ರಾಷ್ಟ್ರೀಯ ಆರೋಗ್ಯ ಅಭಿಯಾನದ ಘೋಷಣೆಯಂತೆ ಹೆಚ್.ಐ.ವಿ ಸೋಂಕು ಮುಕ್ತ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸುವುದು ನಮ್ಮೆಲ್ಲರ ಕರ್ತವ್ಯ. ಹೆಚ್.ಐ.ವಿ ಸೋಕು ಒಂದು ವೈರಾಣು. ಇದು ಸೋಂಕಿತ ವ್ಯಕ್ತಿಯ ಸಹಜವಾದ ರೋಗ ನಿರೋಧಕ ಶಕ್ತಿಯನ್ನು ಕುಗ್ಗಿಸುತ್ತದೆ. ಇದರಿಂದ ಹಲವು ರೋಗಗಳು ನಮ್ಮ ದೇಹ ಪ್ರವೇಶಿಸುತ್ತವೆ. ಆದ್ದರಿಂದ ಯುವಕರಲ್ಲಿ ಈ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಿ ಸೋಂಕಿನ ಪ್ರಮಾಣ ಶೂನ್ಯಕ್ಕೆ ತರುವುದು ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಅತ್ಯತ್ತಮ ಕಾರ್ಯನಿರ್ವಹಿಸಿದ ಚರ್ಮರೋಗ ತಜ್ಞವೈದ್ಯ ವಿಜಯಕುಮಾರ್, ಐ.ಸಿ.ಟಿ.ಸಿ ಸಿಬ್ಬಂದಿ ಪ್ರಕಾಶ. ಎಂ.ಹೆಚ್, ರಮೇಶ್.ಪಿ.ಡಿ, ಮರುಳ ಸಿದ್ದಗೌಡ, ಕ್ಷೇತ್ರ ಕಾರ್ಯಕರ್ತೆ ರೋಜಿ ಇಲಿಯಾಸ್ ಪರದೇಶಿ, ಸಮುದಾಯ ಆರೋಗ್ಯ ಕಾರ್ಯಕರ್ತ ದೇವರಾಜು, ಸಂಪರ್ಕ ಕಾರ್ಯಕರ್ತೆ ಶಾಂತಮ್ಮ, ವಿಜ್ಞಾನ ಶಿಕ್ಷಕ ನಾಗಭೂಷಣ್.ಟಿ.ಎಸ್. ಅವರಿಗೆ ಸನ್ಮಾನಿಸಲಾಯಿತು. ಇದೇ ರೀತಿ ವಿವಿದ ಕಾಲೇಜುಗಳಲ್ಲಿ ಉತ್ತಮ ಕಾರ್ಯನಿರ್ವಹಿಸಿದ ರೆಡ್ ರಿಬ್ಬನ್ ಕ್ಲಬ್‌ಗಳನ್ನ ಸನ್ಮಾನಿಸಲಾಯಿತು. ಈ ವೇಳೆ ಮಹಾರಾಜ ಮದಕರಿ ನಾಯಕ ಕಾಲೇಜಿನ ಎನ್‌ಎಸ್‌ಎಸ್ ಸಂಚಾಲಕಿ ಪ್ರೊ. ಎನ್.ಟಿ.ಗಂಗಮ್ಮ, ಪ್ರೊ.ಎನ್.ಶ್ರೀನಿವಾಸ್, ಡಾ.ಧನಂಜಯ್, ಜಿಲ್ಲಾಸ್ಪತ್ರೆ ಎಆರ್‌ಟಿ ಕೇಂದ್ರ ವೈದ್ಯಾಧಿಕಾರಿ ಡಾ.ರೂಪಶ್ರೀ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸ್ವಯಂ ಸೇವಾ ಸಂಘ ಸಂಸ್ಥೆಗಳಿಂದ ಅರ್ಜಿ

» **ದಾವಣಗೆರೆ**

ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ದೌರ್ಜನ್ಯ ತಡೆ ಕಾಯ್ದೆ ಮತ್ತು ಯೋಜನೆಗಳ ಬಗ್ಗೆ ಸಂಘ-ಸಂಸ್ಥೆಗಳ ಸಮನ್ವಯದೊಂದಿಗೆ ವಿವಿಧ ಗ್ರಾಮಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮವನ್ನು ಆಯೋಜಿಸಲು ಅರ್ಹ ಸ್ವಯಂ ಸೇವಾ ಸಂಘ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಡಿಸೆಂಬರ್ 10 ರೊಳಗಾಗಿ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ದಾವಣಗೆರೆ ಕಚೇರಿಗೆ ಸಲ್ಲಿಸಬೇಕು. ಸ್ವಯಂ ಸೇವಾ ಸಂಘಸಂಸ್ಥೆಗಳಿಗೆ ಇರಬೇಕಾದ ಅರ್ಹತೆಗಳು: ಸ್ವಯಂ ಸೇವಾ ಸಂಘ ಸಂಸ್ಥೆಯು ನೊಂದಾಯಿತ ಸಂಸ್ಥೆಯಾಗಿದ್ದು ನೊಂದಣಿ ಚಾಲ್ತಿಯಲ್ಲಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಅಭಿವೃದ್ಧಿಗಾಗಿ ಕನಿಷ್ಠ 5 ವರ್ಷಗಳ ಸೇವಾನುಭವ ಹೊಂದಿರಬೇಕು. ಪ್ರತಿ ವರ್ಷ ಅಡಿಟ್ ಮಾಡಿಸಿರಬೇಕು.

### ಮಕ್ಕಳ ಅಹವಾಲು ಹಾಗೂ ಅರಿವು ಕಾರ್ಯಕ್ರಮ

» **ದಾವಣಗೆರೆ**

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ವತಿಯಿಂದ ಡಿ.4 ರಂದು ಬೆಳಿಗ್ಗೆ 10.30ಕ್ಕೆ ಚನ್ನಗಿರಿ ವಾಲ್ಮೀಕಿ ಸಭಾಂಗಣದಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿ, ಸಿಬ್ಬಂದಿಗಳಿಗೆ ಜೆ.ಜೆ.ಕಾಯ್ದೆ-2015, ಬಾಲ್ಯ ವಿವಾಹ ನಿಷೇಧ ಕಾಯ್ದೆ-2006, ಆರ್‌ಟಿಇ ಕಾಯ್ದೆ-2009, ಭ್ರೂಣಹತ್ಯೆ, ವಲಸೆ ಕುಟುಂಬದಲ್ಲಿನ ಮಕ್ಕಳ ರಕ್ಷಣೆ, ಮಕ್ಕಳ ಸಾಗಾಣಿಕೆ ಮತ್ತು ಮಾರಾಟ ನಿಷೇಧ ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳ ಪುನರ್ವಸತಿ ಕುರಿತು ಹಾಗೂ ಡಿ.5 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ತುಂಗಾಭದ್ರಾ ಸಭಾಂಗಣದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿ, ಸಿಬ್ಬಂದಿಗಳಿಗೆ ಮಕ್ಕಳ ಕಾಯ್ದೆಗಳಿಗೆ ಸಂಬಂಧಿಸಿದಂತೆ ಮಕ್ಕಳ ಅಹವಾಲು ಹಾಗೂ ಮಕ್ಕಳೊಂದಿಗೆ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ತಿಳಿಸಿದ್ದಾರೆ.

### ಉಚಿತ ಪರೀಕ್ಷಾ ಪೂರ್ವ ತರಬೇತಿ

» **ದಾವಣಗೆರೆ**

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ದಾವಣಗೆರೆ ವತಿಯಿಂದ ಕರ್ನಾಟಕ ಲೋಕಸೇವಾ ಆಯೋಗ ಇವರು ನಡೆಸುವ ಕೆ.ಎ.ಎಸ್. ಹುದ್ದೆಗಾಗಿ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲಿರುವ ಪರೀಕ್ಷಾರ್ಥಿಗಳಿಗೆ ಡಿ.9 ರಿಂದ 19 ರವರೆಗೆ ನಗರದ ಶ್ರೀರಾಮನಗರದಲ್ಲಿನ ಗಾಂಧಿ ಭವನದಲ್ಲಿ, ಎಸ್.ಎಸ್.ಹೈಟೆಕ್ ಆಸ್ಪತ್ರೆ ಹಿಂಭಾಗ, ಶ್ರೀರಾಮನಗರ ರಸ್ತೆ, ಇಲ್ಲಿ ಉಚಿತ ಪರೀಕ್ಷಾಪೂರ್ವ ತರಬೇತಿಯನ್ನು ಆಯೋಜಿಸಲಾಗಿದೆ. ತರಬೇತಿಗೆ ಹಾಜರಾಗಲಿಚ್ಛಿಸುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ (ಬಸ್ಸು ನಂ-103) ತರಬೇತಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ-7406323294 ಯನ್ನು ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

### ಡಿ.7 ರಂದು ಪಾಲಿಕೆ ಆಯ-ವ್ಯಯ ಸಭೆ

» **ದಾವಣಗೆರೆ**

2025-26ನೇ ಸಾಲಿನ ಆಯ-ವ್ಯಯ ಅಂದಾಜು ಪಟ್ಟಿ ತಯಾರಿಸಲು ಸಲಹೆಗಳನ್ನು ಪಡೆಯಲು ಡಿ.7 ರಂದು ಬೆಳಿಗ್ಗೆ 11 ಗಂಟೆಗೆ ಮಹಾನಗರಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ಮೊದಲನೆಯ ಸಭೆಯನ್ನು ಆಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

# ದಿವ್ಯಾಂಗರಲ್ಲಿ ಶ್ರದ್ದೆ, ಬದ್ದತೆ ಹೆಚ್ಚು, ಸರ್ವತೋಮುಖ ಏಳಿಗೆಗೆ ಯೋಜನೆಗಳನ್ನು ರೂಪಿಸುವ ಅವಶ್ಯಕತೆ ಇದೆ

» **ದಾವಣಗೆರೆ**

ದಿವ್ಯಾಂಗ ಜನರಲ್ಲಿ ಶ್ರದ್ದೆ, ಬದ್ದತೆ ಹೆಚ್ಚಿದ್ದು ಇವರ ಸರ್ವತೋಮುಖ ಏಳಿಗೆಗಾಗಿ ಯೋಜನೆಗಳನ್ನು ರೂಪಿಸುವ ಅವಶ್ಯಕತೆ ಇದೆ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಜಿಲ್ಲಾ ಆಡಳಿತ, ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಜಿಲ್ಲೆಯಲ್ಲಿ ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಸರ್ಕಾರ ವಿಕಲಚೇತನರಿಗಾಗಿ ತ್ರಿಚಕ್ರ ಮೋಟಾರು ಸೈಕಲ್, ಪಿಂಚಣಿ, ಬಸ್ ಪಾಸ್, ಸ್ವ ಉದ್ಯೋಗಕ್ಕೆ ಸಾಲ ಸೌಲಭ್ಯ ಸೇರಿದಂತೆ ಹಲವಾರು ಸೌಲಭ್ಯ ಕಲ್ಪಿಸಿದೆ. ಆದರೆ ಅವರಿಗೆ ಆ ಸೌಲಭ್ಯಗಳನ್ನು ತಲುಪಿಸಲು ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಪ್ರಾಮಾಣಿಕವಾದ ಕೆಲಸ ಮಾಡಬೇಕಾಗಿದೆ. ಚಿಕಲಚೇತನರಿಗೆ ಸೌಲಭ್ಯ ಕಲ್ಪಿಸಲು ಹಣ ವಸೂಲಿ ಮಾಡಲಾಗುತ್ತಿದೆ ಎಂಬ ದೂರುಗಳು ಕೇಳಿ ಬರುತ್ತವೆ. ಆದರೆ ವಿಕಲಚೇತನರ ಪೋಷಕರು ಮೊದಲೇ ಅವರ ಪೋಷಣೆ ಮತ್ತು ಕುಟುಂಬ ನಿರ್ವಹಣೆ ಮಾಡುವುದೇ ಕಷ್ಟವಾಗಿರುತ್ತದೆ. ಹೀಗಿರುವಾಗ ಅವರ ಸೌಲಭ್ಯಗಳು ಪಾರದರ್ಶಕವಾಗಿ ಸಿಗುವಂತಾಗಬೇಕೆಂದರು.

ವಿಕಲಚೇತರಿಗೆ ಕೇವಲ 50 ಸಾವಿರದಿಂದ 1 ಲಕ್ಷದವರೆಗೆ ಸಾಲಸೌಲಭ್ಯ ಕಲ್ಪಿಸಿದರೆ ಸಾಲಾದು, ಅವರಿಗೆ 10 ರಿಂದ 15 ಲಕ್ಷದವರೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಡ್ಡಿರಹಿತ ಸಾಲಸೌಲಭ್ಯ ನೀಡಿದರೆ ಅವರು ಗುಡಿ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ಆರ್ಥಿಕವಾಗಿ ಸಬಲರಾಗಿ ಸಮಾಜದ ಮುಖ್ಯವಾಹಿನಿಗೆ ಬರಲು ಸಹಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು. ವಿಕಲಚೇತನರು ಸಮಾಜಕ್ಕೆ ಹೊರೆಯಲ್ಲ, ಸ್ವಾವಲಂಬಿ ಜೀವನ ನಡೆಸಲು ಪೂರಕವಾದ ವಾತಾವರಣ ಕಲ್ಪಿಸುವ ಮೂಲಕ ಅವರನ್ನು ಮುಖ್ಯವಾಹಿನಿಗೆ ತರಬೇಕೆಂದು ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಮಾತನಾಡಿ, ಛಲ, ಶ್ರದ್ಧೆ ಇದ್ದರೆ ಯಾವ ಕ್ಷೇತ್ರದಲ್ಲಾದರೂ ಮುಂದೆ ಬರಬಹುದು. ವಿಕಲಚೇತನರು ಸಾಲ ಸೌಲಭ್ಯ ಪಡೆದುಕೊಂಡು ಸ್ವಾವಲಂಬಿ ಜೀವನ ನಡೆಸಿಕೊಳ್ಳಬೇಕು. ಸರ್ಕಾರಿ ಸೌಲಭ್ಯ ಕಲ್ಪಿಸಲು ಅಧಿಕಾರಿಗಳು ವಿಕಲಚೇತನರಿಂದ ಹಣ ವಸೂಲಿ ಮಾಡುವ ಬಗ್ಗೆ ಫಲಾನುಭವಿಗಳ ದೂರುಗಳು ಬರುತ್ತಿವೆ ಎಂಬ ಮಾಹಿತಿ ಆಧರಿಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ದೂಡಾ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ, ಮಹಾನಗರಪಾಲಿಕೆ ಮೇಯರ್ ಚಮನ್ ಸಾಬ್, ಎಎಸ್ಪಿ ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ರಾಜನಾಯ್ಕ್, ಅಂಗವಿಕಲರ ಕಲ್ಯಾಣಾಧಿಕಾರಿ ಡಾ, ಪ್ರಕಾಶ್, ಆಶಾಕಿರಣ ಟ್ರಸ್ಟಧ್ಯಕ್ಷ ರಮಣ್‌ಲಾಲ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ವಿಕಲಚೇತನರಿಗೆ ಮೋಟಾರ್ ಸೈಕಲ್ ವಿತರಣೆ: ಜಿಲ್ಲಾಡಳಿತ ಕಚೇರಿ ಮುಂಭಾಗದಲ್ಲಿ ಅರ್ಹ ಫಲಾನುಭವಿಗಳಿಗೆ ಶಾಸಕ ಕೆ.ಎಸ್.ಬಸವಂತಪ್ಪ ಅವರು ಮೋಟಾರ್ ಸೈಕಲ್ ವಿತರಿಸಿದರು.

# ಹೆಚ್‌ಐವಿ ಸೋಂಕಿತರಿಗೆ ಸಾಮಾಜಿಕ ತಾರತಮ್ಯ ಸಲ್ಲದು: ನ್ಯಾ.ಮಹಾವೀರ.ಮ.ಕರೆಣ್ಣನವರ್

» **ದಾವಣಗೆರೆ**

ಹೆಚ್‌ಐವಿ ಸೋಂಕಿತರೊಂದಿಗೆ ಕುಳಿತು ಊಟ ಮಾಡಿದರೆ ಅಥವಾ ಒಂದೇ ಮನೆಯಲ್ಲಿ ವಾಸವಿದ್ದ ಮಾತ್ರಕ್ಕೆ ಸೋಂಕು ಇತರರಿಗೆ ಹರಡುವುದಿಲ್ಲ. ಹೀಗಾಗಿ ಹೆಚ್‌ಐವಿ ಸೋಂಕಿತರನ್ನು ಸಾಮಾಜಿಕವಾಗಿ ದೂರವಿರಿಸುವುದು ಸರಿಯಲ್ಲ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವನರ್ ತಿಳಿಸಿದರು.

ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಸಂಜೀವಿನಿ ಪಾಸಿಟಿವ್ ನೆಟ್ವರ್ಕ್, ಶ್ರೀ ದುರ್ಗಾಶಕ್ತಿ ಏಡ್ಸ್ ತಡೆಗಟ್ಟುವ ಮಹಿಳಾ ಸಂಘ, ಅಭಯ ಸ್ಪಂದನ ಸ್ವಯಂ ಸೇವಾ ಸಂಸ್ಥೆ, ಜೆಪಿಎನ್‌ಜಿಎಸ್‌ಎಸ್ ಸಂಸ್ಥೆ, ಜಿಲ್ಲೆಯ ಎಲ್ಲಾ ರಕ್ತನಿಧಿ ಕೇಂದ್ರಗಳು, ಜಿಲ್ಲಾ ಆರ್.ಆರ್.ಸಿ ಕಾಲೇಜು, ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್, ಘಟಕ, ಜಿಲ್ಲಾ ಎನ್.ವೈ.ಕೆ ಶಿಕ್ಷಣ ಇಲಾಖೆ, ವಿಶ್ವವಿದ್ಯಾನಿಲಯದೃಶ್ಯಕಲಾಮಹಾವಿದ್ಯಾನಿಲಯ ಇವರ ಸಹಯೋಗದೊಂದಿಗೆ ಮಂಗಳವಾರ ದೃಶ್ಯಕಲಾ ಮಹಾವಿದ್ಯಾಲಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ "ವಿಶ್ವ ಏಡ್ಸ್ ದಿನಾಚರಣೆ"ಯನ್ನು ಉದ್ಘಾಟಿಸಿ ಮಾತಾನಾಡಿದರು.

ಹೆಚ್‌ಐವಿ, ಏಡ್ಸ್ ಸೋಂಕು ಹೊಂದಿರುವವರ ಜೊತೆಯಲ್ಲಿ ಕುಳಿತರೆ, ಜೊತೆಯಲ್ಲಿ ಊಟ ತಿಂಡಿ, ಬಟ್ಟೆ ಹಂಚಿಕೊಳ್ಳುವುದರಿಂದ, ಸೊಳ್ಳೆ ಕಚ್ಚುವುದರಿಂದ, ಒಂದೇ ಸ್ನಾನದ ಮನೆ, ಅಡುಗೆ ಮನೆ, ಶೌಚಾಲಯ ಬಳಸುವುದರಿಂದ ಸೋಂಕು ಇತರರಿಗೆ ಹರಡುವುದಿಲ್ಲ. ಸೋಂಕಿತರೊಂದಿಗೆ ಅಸುರಕ್ಷಿತ ಲೈಂಗಿಕತೆ, ಸೋಂಕಿತರಿಂದ ಪಡೆಯುವ ರಕ್ತದಾನದಿಂದ, ಸಂಸ್ಕರಣೆ ಮಾಡದ ಸೂಜಿ, ಸಿರಿಂಜ್ ಬಳಕೆಯಿಂದ ಹೆಚ್‌ಐವಿ ಸೋಂಕು ಇತರರಿಗೆ ಹರಡುತ್ತದೆ. ಹೀಗಾಗಿ ಸೋಂಕಿತರನ್ನು ಸಾಮಾಜಿಕವಾಗಿ ದೂರವಿರಿಸುವುದು, ತಿರಸ್ಕರಿಸುವುದು ಸರಿಯಲ್ಲ. ಹೆಚ್‌ಐವಿ ಸೋಂಕಿತರು ವೈದ್ಯರ ಸಲಹೆಯಂತೆ ಸರಿಯಾದ ಕ್ರಮದಲ್ಲಿ ನಿತ್ಯ ಔಷಧ ಸೇವನೆಯಿಂದ ಹಾಗೂ ಆರೋಗ್ಯಕರ ಜೀವನ ಶೈಲಿ ಅನುಸರಿಸಿದರೆ ಸಾಮಾನ್ಯರಂತೆ ಬದುಕಬಹುದು ಎಂದರು.



ಏಡ್ಸ್ ರೋಗವು ರೋಗ ನಿರೋಧಕ ಶಕ್ತಿಯನ್ನು ಕುಂಠಿತಗೊಳಿಸುತ್ತದೆ ಮತ್ತು ಗುಣಾತ್ಮಕ ಜೀವನ ಮಟ್ಟವನ್ನು ಕಡಿಮೆ ಮಾಡುತ್ತದೆ. ಆದ್ದರಿಂದ ಸಾರ್ವಜನಿಕರು ಏಡ್ಸ್ ರೋಗವು ಯಾವ ಮೂಲಗಳಿಂದ ಮತ್ತು ಯಾವ ರೀತಿ ಬರುತ್ತದೆ ಎಂಬುದನ್ನು ತಿಳಿಯಬೇಕು.

ಏಡ್ಸ್ ಖಾಯಿಲೆಯು ಹೊರದೇಶದಿಂದ ಬಂದಿದ್ದು, ಈ ಖಾಯಿಲೆ ಕುರಿತು ಮುಖ್ಯವಾಗಿ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು. ರೋಗಬಂದ ನಂತರ ಪರಿತಪಿಸುವ ಬದಲು ರೋಗಗಳು ಬಾರದಂತೆ ಮುನ್ನೆಚರಿಕೆಯನ್ನು ವಹಿಸಬೇಕು. ಎಚ್.ಐ.ವಿ ಬಂದಿದೆ ಎಂದು ತಿಳಿದಾಕ್ಷಣ ಕುಗ್ಗಿ ಹೋಗದೆ, ಅದಕ್ಕೆ ಪರಿಹಾರವನ್ನು ಕಂಡುಕೊಂಡು ಬದುಕುಬೇಕು. ಪ್ರಜ್ಞಾವಂತರಾಗಿ ಬದುಕಿ ಸ್ವಾಸ್ಥ್ಯ ಸಮಾಜವನ್ನು ನಿರ್ಮಾಣ ಮಾಡಬೇಕು ಎಂದು ತಿಳಿಸಿದರು. 2030 ರ ವೇಳೆಗೆ ಏಡ್ಸ್‌ಮುಕ್ತ ಸಮಾಜ ಮಾಡುವ ಗುರಿಯನ್ನು ಹೊಂದಲಾಗಿದ್ದು ಇದಕ್ಕೆ ಸಾರ್ವಜನಿಕರ ಸಹಭಾಗಿತ್ವ ಅತಿ ಮುಖ್ಯವಾಗಿದೆ ಎಂದು ತಿಳಿಸಿದ ಅವರು ಏಡ್ಸ್ ದಿನವನ್ನು ನಾವು ಸಂಭ್ರಮದಿಂದ ಆಚರಿಸುತ್ತಿಲ್ಲ. ಬದಲಾಗಿ ಏಡ್ಸ್ ಎಂಬ ಮಾರಣಾಂತಿಕ ಖಾಯಿಲೆ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಆಚರಿಸಲಾಗುತ್ತಿದೆ. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು "ಹಕ್ಕುಗಳನ್ನು ಪಡೆಯಲು ಸರಿಯಾದ ಮಾರ್ಗ ಅನುಸರಿಸೋಣ ನನ್ನ ಆರೋಗ್ಯ ನನ್ನ ಹಕ್ಕು" ಎಂಬ ಘೋಷವಾಕ್ಯವು ಉಪಯುಕ್ತವಾಗಿದ್ದು ಜನರಲ್ಲಿ ಆತ್ಮವಿಶ್ವಾಸ ಮೂಡಿಸುವ ಕಾರ್ಯವನ್ನು ಸಮುದಾಯಗಳು ಮಾಡಬೇಕಿದೆ ಎಂದು ತಿಳಿಸಿದರು. ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ ಮಾತಾನಾಡಿ, ಹೆಚ್‌ಐವಿ ರೋಗಕ್ಕೆ ಇದುವರೆಗೂ ಯಾವುದೇ ಲಸಿಕೆ ಕಂಡುಹಿಡಿಯಲು ಸಾಧ್ಯವಾಗಿಲ್ಲ. ಹೀಗಾಗಿ ಸೋಂಕು ಬಾರದಂತೆ ಮುಂಜಾಗ್ರತೆ ವಹಿಸುವುದು ಒಂದೇ ಮನುಕುಲಕ್ಕೆ ಸದ್ಯದ ಮಟ್ಟಿಗೆ ಇರುವ ದಾರಿಯಾಗಿದೆ. ಸೋಂಕಿತರಿಗೆ ಸಾಮಾಜಿಕ ಹಾಗೂ ಕೌಟುಂಬಿಕ ಬೆಂಬಲ ದೊರೆತಾಗ ಮಾತ್ರ, ಅವರೂ ಕೂಡ ಸಮಾಜದಲ್ಲಿ ಸಹಜ ಬದುಕು ಕಂಡುಕೊಳ್ಳಲು ಸಾಧ್ಯ, ಸಾರ್ವಜನಿಕರು ಮತ್ತು ಎನ್‌ಜಿಓ ಗಳು ಒಟ್ಟಾಗಿ ಜನರಲ್ಲಿ ಏಡ್ಸ್‌ನ ಕುರಿತು ತಿಳುವಳಿಕೆಯನ್ನು ಮೂಡಿಸಬೇಕು ಎಂದರು. ಮಾರಣಾಂತಿಕ ಖಾಯಿಲೆಗಳ ಬಗ್ಗೆ ಜಾಗೃತಿಯನ್ನು ಮೂಡಿಸಲು ಸಮುದಾಯಗಳ ಸಹಭಾಗಿತ್ವ ಪ್ರಮುಖವಾಗಿದೆ. ಆರೋಗ್ಯಕ್ಕೆ ಸಂಬಂಧಿಸಿದ ಸೌಲಭ್ಯಗಳನ್ನು ಯಾವುದೇ ಸಂಕೋಚವಿಲ್ಲದೇ ಸಾರ್ವಜನಿಕರು ಪಡೆಯಬೇಕು. ಅಸುರಕ್ಷಿತ ಲೈಂಗಿಕತೆ ಮತ್ತು ಸಿರಿಂಜ್ ಬಳಕೆಯ ಸಂದರ್ಭದಲ್ಲಿ ಜನತೆ ಜಾಗೃತರಾಗಬೇಕೆಂದು ತಿಳಿಸಿದರು.

ಏಡ್ಸ್ ದಿನಾಚರಣೆ ಜಾಗೃತಿ ಜಾಥಾ : ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ವಿಶ್ವ ಏಡ್ಸ್ ದಿನಚಾರಣೆಯ ಅಂಗವಾಗಿ ಜಿಲ್ಲಾ ಚಿಗಟೇರಿ ಆಸ್ಪತ್ರೆ ಆವರಣದಿಂದ ಆಯೋಜಿಸಲಾಗಿದ್ದ " ವಿಶ್ವ ಏಡ್ಸ್ ದಿನ-2024" ಜಾಥಾಕ್ಕೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಷಣ್ಮುಖಪ್ಪ ಚಾಲನೆ ನೀಡಿದರು.

**ಆರ್‌ಸಿ ಕೇಂದ್ರದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ**

# ದಿವ್ಯಾಂಗರ ಅಭಿವೃದ್ಧಿಗಾಗಿ ಸಿಆರ್‌ಸಿ ಕೆಲಸ ಶ್ಲಾಘನೀಯ



» **ದಾವಣಗೆರೆ**

ಆರೈಕೆದಾರರು ಮತ್ತು ವಿದ್ಯಾರ್ಥಿಗಳು ದಿವ್ಯಾಂಗರ ಅಭಿವೃದ್ಧಿ ಮತ್ತು ಭವಿಷ್ಯಕ್ಕಾಗಿ ಅವರ ನಾಯಕತ್ವ ಹೆಚ್ಚಿಸಬೇಕೆಂದು ಸಿಆರ್‌ಸಿ ನಿರ್ದೇಶಕರಾದ ಮೀನಾಕ್ಷಿ ತಿಳಿಸಿದರು. ಮಂಗಳವಾರ (ಡಿ.3) ರಂದು ಸಿಆರ್‌ಸಿ ಕಚೇರಿಯಲ್ಲಿ ವಿಕಲಚೇತನರು, ಪೋಷಕರಿಗಾಗಿ ವಿವಿಧ ಕಾರ್ಯಕ್ರಮಗಳು ಸ್ಪರ್ಧೆಗಳನ್ನು ನಡೆಸುವ ಮೂಲಕ ಅಂತರರಾಷ್ಟ್ರೀಯ ದಿವ್ಯಾಂಗರ ದಿನದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತಾನಾಡಿದರು. 30-ದಿವ್ಯಾಂಗ ವ್ಯಕ್ತಿಗಳಿಗೆ 57-ಸಹಾಯಕ ಸಾಧನಗಳನ್ನು ಸಿಆರ್‌ಸಿ ಪಿಎಂಡಿಕೆ, ಎಡಿಐಪಿ, ಆರ್‌ವಿವೈ ಯೋಜನೆಗಳ ಮೂಲಕ ವಿತರಿಸಲಾಯಿತು. ದಿವ್ಯಾಂಗ ಮಕ್ಕಳ ಪೋಷಕರು ಮತ್ತು ದಿವ್ಯಾಂಗ ವಿದ್ಯಾರ್ಥಿಯು ದಾವಣಗೆರೆಯ ಸಿಆರ್‌ಸಿ ಯ ಆರಂಭಿಕ ಮಧ್ಯಸ್ಥಿಕೆ ಸೇವೆಗಳು, ಕೌಶಲ್ಯ ಅಭಿವೃದ್ಧಿ ವೃತ್ತಿಪರ ತರಬೇತಿ ಸೇವೆಗಳು ಮತ್ತು ಉಚಿತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೋರ್ಸ್‌ಗೆ ಸಂಬಂಧಿಸಿದಂತೆ ಪಿಡಬ್ಲ್ಯೂಡಿ ಗಳ ಪುನರ್ವಸತಿ ಮತ್ತು ಸಬಲೀಕರಣಕ್ಕಾಗಿ ದಾವಣಗೆರ ಸಿಆರ್‌ಸಿ ಮಾಡುತ್ತಿರುವ ಪ್ರಯತ್ನಗಳನ್ನು ಶ್ಲಾಘಿಸಿದರು. 17-ವಿಕಲಚೇತನರು ಆರೈಕೆದಾರರು ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. 21-ವಿದ್ಯಾರ್ಥಿಗಳು ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. 16-ವಿದ್ಯಾರ್ಥಿಗಳು, ಹಾರೈಕೆದಾರರು ರಂಗೋಲಿ ಸ್ಪರ್ಧೆಯಲ್ಲಿ ಭಾಗವಹಿಸಿದರು. 1-ಗಾಯನ, 4-ನೃತ್ಯಗಳು, 7-ಅಲಂಕಾರಿಕ ಉಡುಪುಗಳು ಸೇರಿದಂತೆ ಸಾಂಸ್ಕೃತಿಕ ಸ್ಪರ್ಧೆಗಳನ್ನು ಇ.ತಾಮರೈಸೆಲ್ವನ್, ರಾಜು ಟಿ, ಮಾರುತಿ ಕೃಷ್ಣ ಗೌಡ ಮತ್ತು ಸುರೇಂದ್ರಬಾಬು ರವರುಗಳು ನಡೆಸಿಕೊಟ್ಟರು. ಈ ದಿನದ ಸ್ಪರ್ಧೆಯಲ್ಲಿ 110 ವಿಕಲಚೇತನರು ಹಾರೈಕೆದಾರರು ಭಾಗವಹಿಸಿದ್ದಾರೆ. ಸಿಜಿ ಆಸ್ಪತ್ರೆಯ ಕರ್ನಾಟಕ ಬ್ರೈನ್ ಹೆಲ್ತ್ ಇನಿಶಿಯೇಟಿವ್‌ನ ನರರೋಗ ತಜ್ಞ ಡಾ.ವೀರಣ್ಣ ಗಡದ್, ಕಬಿ-ಸಿಜಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಸಂಧ್ಯಾ ಅವರು ಅಂಗವೈಕಲ್ಯಕ್ಕೆ ಕಾರಣವಾಗುವ ಸಾಮಾನ್ಯ ನರವೈಜ್ಞಾನಿಕ ಕಾಯಿಲೆಗಳ ಕುರಿತು ಮಾತನಾಡಿದರು. ಸಾಮಾನ್ಯ ಅಸ್ವಸ್ಥತೆಗಳನ್ನು ತಡೆಗಟ್ಟುವ ವಿಧಾನಗಳು ಎಪಿಲೆಪ್ಸಿ, ಸ್ಟ್ರೋಕ್, ಬುದ್ಧಿಮಾಂದ್ಯತೆ, ಲಭ್ಯವಿರುವ ಚಿಕಿತ್ಸಾ ಆಯ್ಕೆಗಳು ಮತ್ತು ಪುನರ್ವಸತಿ ಸೇವೆಗಳ ಕುರಿತು ತಿಳಿಸಿದರು.

## ಪ್ರಮುಖ ಸುದ್ದಿ

**ಅಧಿಕಾರಿಗಳಿಗೆ ಶಾಸಕ ಬಿ.ಜಿ.ಗೋವಿಂದಪ್ಪ ತಾಕೀತು**

# ಹೊಸದುರ್ಗ ಪಟ್ಟಣವನ್ನು ಹೊಸದಾಗಿ ನಿರ್ಮಿಸಿ

» **ಹೊಸದುರ್ಗ**

ಳಚರಂಡಿ ಕಾಮಗಾರಿ ಶೀಘ್ರ ಮುಗಿಯಬೇಕು ಮುಖ್ಯವಾಗಿ ಒಳಚರಂಡಿ ಕಾಮಗಾರಿ ಯಾವುದೇ ಲೋಪಗಳಿಲ್ಲದೇ ನಡೆಯಬೇಕು. ಒಳಚರಂಡಿಕಾಮಗಾರಿಸಂಬಂಧಿಸಿದಂತೆ ಪುರಸಭೆ ಮಾಜಿ ಅಧ್ಯಕ್ಷರ ಮನೆ ಮುಂದೆ ಹಾಗೂ ಇತರೆಡೆ ಸಮಸ್ಯೆಗಳಿದ್ದಲ್ಲಿ ಇಂಜಿನಿಯರ್, ಮುಖ್ಯಾಧಿಕಾರಿಗಳು ಹಾಗೂ ಪೋಲಿಸ್ ಸಮ್ಮುಖದಲ್ಲಿ ಇತ್ಯರ್ಥಗೊಳಿಸಬೇಕು. ಚರಂಡಿ ನೀರು ರಸ್ತೆಗೆ ಬಾರದಂತೆ ಎಚ್ಚರವಹಿಸಬೇಕು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಅಧಿಕಾರಿಗಳಿಗೆ ಎಚ್ಚರಿಸಿದರು.ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ 'ಹೊಸದುರ್ಗ ಪಟ್ಟಣದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ ರಸ್ತೆ ಅಭಿವೃದ್ಧಿ ವಿಚಾರಕ್ಕೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ'ಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಪಟ್ಟಣದಲ್ಲಿ ರಸ್ತೆ ಕಾಮಗಾರಿ ಚೆನ್ನಾಗಿ ನಿರ್ವಹಿಸಿ, ಪಟ್ಟಣಕ್ಕೆ ಬರುವ ಮತ್ತು ಹೋಗುವ ಮಾರ್ಗದಲ್ಲಿ ವಿದ್ಯುತ್ ದೀಪಗಳಿಂದ ಅಲಂಕರಿಸಿ, ಒಳಚರಂಡಿ ಕಾಮಗಾರಿ ಸೇರಿದಂತೆ ಎಲ್ಲಾ ಕಾರ್ಯಗಳನ್ನು ಶ್ರೇಷ್ಠ ಗುಣಮಟ್ಟದಲ್ಲಿ ನಿರ್ವಹಿಸಿ, ಹೊಸದುರ್ಗ ಪಟ್ಟಣವನ್ನು ಹೊಸದಾಗಿ ನಿರ್ಮಿಸಿ, ಸುಂದರ ನಗರವನ್ನಾಗಿಸಬೇಕು ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಅಧಿಕಾರಿಗಳಿಗೆ ಸೂಚಿಸಿದರು. ಕಾಮಗಾರಿ ಪೂರ್ಣಗೊಳ್ಳುವ ಮುನ್ನ ಪೈಪ್ ಲೈನ್ ಅಳವಡಿಸಿಕೊಳ್ಳಿ, ರಸ್ತೆ ಒಡೆಯಬೇಡಿ. ಡಿವೈಡರ್ ಹಾಕುವಾಗ ಪೋಲಿಸ್ ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಬೇಕು. ಗುಡ್ಡದಿಂದ ಬಸಿನೀರು ಬಂದು ರಸ್ತೆ ಹಾಳಾಗದಂತೆ ಕ್ರಮವಹಿಸಿ ಎಂದರು.



ಮೊದಲು ಪಟ್ಟಣದ ವ್ಯಾಪ್ತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಬೇಕು ನಂತರ ಹೋಬಳಿವಾರು ಕೆಲಸ ಕೈಗೆತ್ತಿಕೊಳ್ಳಿ. ಪ್ರಮುಖ ವೃತ್ತಗಳನ್ನು ಸುಂದರವಾಗಿ ನಿರ್ಮಿಸಿ, ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ಪ್ರತಿಮೆಗಳನ್ನು ಕೂರಿಸಲು ಸರಿಯಾದ ಕ್ರಮ ಕೈಗೊಳ್ಳಬೇಕು. ಟಿ.ಬಿ. ವೃತ್ತದಲ್ಲಿ ನೂತನ ತಂಗುದಾಣ ನಿರ್ಮಾಣ ಆಗಬೇಕು.ನಿತ್ಯ ವಿದ್ಯುತ್ ವ್ಯತ್ಯಯ ಉಂಟಾಗುತ್ತಿದ್ದು, ಸಾರ್ವಜನಿಕರು ಹಾಗೂ ರೈತರಿಗೆ ಸಮಸ್ಯೆ ಎದುರಾಗಿದೆ. ಶೀಘ್ರವಾಗಿ ಕಾಮಗಾರಿ ನಿರ್ವಹಿಸಿ, ವಿದ್ಯುತ್ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬೇಕು ಎಂದು ಬೆಸ್ಕಾಂ ಇಲಾಖಾ ಅಧಿಕಾರಿಗಳಿಗೆ ಶಾಸಕ ಬಿ.ಜಿ ಗೋವಿಂದಪ್ಪ ಸೂಚಿಸಿದರು.

ಪಟ್ಟಣದ ಟಿ.ಬಿ. ವೃತ್ತದಿಂದ ಯಾಲಕಪ್ಪನಹಟ್ಟಿ ಹಾಗೂ ಬೋಕಿಕೆರೆ, ಹುಳಿಯಾರು ರಸ್ತೆಯಲ್ಲಿನ ಪೆಟ್ರೋಲ್ ಬಂಕ್ ವರೆಗೂ ವಿದ್ಯುತ್ ದೀಪಗಳಿರಲಿ. ಸರ್ವೆ ನಂಬರ್ 35 ಹಾಗೂ 36 ರಲ್ಲಿನ ರಾಜಕಾಲುವೆ ನಿರ್ಮಾಣ ಕೂಡಲೇ ಆಗಬೇಕು ಎಂದರು.

ಪುರಸಭಾ ಕಾರ್ಯಾಲಯ, ಹೊಸದುರ್ಗ-577527
ಜಿಲ್ಲೆ : ಚಿತ್ರದುರ್ಗ

E - Mail: tmchosdurga@yahoo.com ದೂರವಾಣಿ:- (08199) 230221
Website: www.hosadurgatown.gov.in ಜನಹಿತ:- 080-23108108
ನಂ.ಪುಸಹೊ/ಆ.ಶಾ/ಸಿಆರ್-160/2024-25 ದಿನಾಂಕ: 04-12-2024

**ಬಹಿರಂಗ ಹರಾಜು ಪ್ರಕಟಣೆ**

ಹೊಸದುರ್ಗ ಪುರಸಭೆಗೆ ಸಂಬಂಧಿಸಿದಂತೆ ಘನತ್ಯಜ್ಯ ವಿಲೇವಾರಿ ಘಟಕದಲ್ಲಿ ದಿನಾಂಕ: 01-10-2024 ರಿಂದ 30-11-2024 ರವರೆಗೆ ಸಂಗ್ರಹವಾದ ತ್ಯಾಜ್ಯವನ್ನು ವಿಂಗಡಿಸಿ ಪುನರ್ ಬಳಕೆ ಮಾಡುವಂತಹ ವಸ್ತುಗಳನ್ನು ಬಹಿರಂಗ ಹರಾಜು ಪ್ರಕ್ರಿಯೆ ಮೂಲಕ ವಿಲೇಮಾಡಲಾಗುತ್ತಿದ್ದು. ಆಸಕ್ತ ಗುಜರಿ ವ್ಯಾಪಾರಸ್ಥರು/ಚಿಂದಿ ಆಯುವವರು/ರೈತರು/ ಆಸಕ್ತ ಇತರೇ ವ್ಯಾಪಾರಸ್ಥರು ರೂ.250/-ಗಳನ್ನು ಮುಖ್ಯಾಧಿಕಾರಿ ಪುರಸಭೆ, ಹೊಸದುರ್ಗ ರವರ ಹೆಸರಿಗೆ ಡಿ.ಡಿ ಮೂಲಕ ಸಂದಾಯ ಮಾಡಿ, ಡಿ.ಡಿ ಪ್ರತಿಯನ್ನು ದಿನಾಂಕ:10-12-2024ರ ಸಂಜೆ 4:00 ಗಂಟೆಯೊಳಗಾಗಿ ಕಛೇರಿಗೆ ಸಲ್ಲಿಸಿ ದಿನಾಂಕ:11-12-2024ರ ಸಂಜೆ 4:30 ಗಂಟೆಗೆ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ನಡೆಯುವ ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆ ಪುರಸಭೆ ಆರೋಗ್ಯ ಶಾಖೆಯಲ್ಲಿ ಸಂಪರ್ಕಿಸಬಹುದಾಗಿದೆ ವಿವರ:- (1) ಘನತ್ಯಾಜ್ಯದಿಂದ ವಿಂಗಡಿಸಿದ ಹಸಿ ತ್ಯಾಜ್ಯ (SEGGREGATED WET WASTE) ಗೊಬ್ಬರ COMPOST (2) ಘನತ್ಯಾಜ್ಯದಿಂದ ವಿಂಗಡಿಸಿದ ಒಣ ತ್ಯಾಜ್ಯ (SEGGREGATED DRY WASTE) (3) ದಿನಾಂಕ: 01-10-2024 ರಿಂದ 30-11-2024 ರವೆರೆಗೆ ಘನತ್ಯಾಜ್ಯದ ಒಣ ಕಸದಿಂದ ಸಂಗ್ರಹವಾದ ಪುನರ್ ಬಳಕೆ ಮಾಡುವಂತಹ ಹಳೆ ಕಬ್ಬಿಣ, ಪ್ಲಾಸ್ಟಿಕ್ ಬಾಟಲ್, ರೊಟ್ಟು, ಗಾಜು, ರಬ್ಬರ್, ತೆಂಗಿನ ಕಾಯಿ ಚಿಪ್ಪು, ಕವುಟು ಹಾಗೂ ಇತರೇ ವಸ್ತುಗಳು.

ಸಹಿ/-
ಮುಖ್ಯಾಧಿಕಾರಿ
ಪುರಸಭೆ, ಹೊಸದುರ್ಗ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T